ಸಂಪುಟ 01 | ಸಂಚಿಕೆ 60 | ಶನಿವಾರ 10 ಜನವರಿ 2026 | ಪುಟ 4 | ಬೆಲೆ-2 ರೂ.

ಇರ್ಫಾನ್ ಕೆ
ಸಂಪಾದಕರು

M A ವಹಾಬ್
ಪ್ರಧಾನ ಸಂಪಾದಕರು

# ನೈಜ್ಯ ದೆಸೆ

NAIJYA DESE

ಸತ್ಯದ ದಿಕ್ಕು TRUE PATH

ಕನ್ನಡ ದಿನ ಪತ್ರಿಕೆ

ಸಿಂಧನೂರು, ಮಸ್ಕಿ
ಮಾನ್ವಿ, ಲಿಂಗಸೂರು,
ರಾಯಚೂರ,ದೇವದುರ್ಗ
ಬಳ್ಳಾರಿ, ಕೊಪ್ಪಳ
ಯಾದಗಿರಿ, ಕಲಬುರ್ಗಿ,
ಬೀದರ, ವಿಜಯಪುರ.
ಗದಗ, ವಿಜಯನಗರ.
ಏಕಕಾಲಕ್ಕೆ ಪ್ರಕಟಣೆ

REGIONAL KANNADA DAILY MORNING

RNI code: KNKAN/25/A3581 ಮೋ: 9902277588, 9880707587, 9008787586 naijyadese@gmail.com

## ಈ ದಿನದ ವಿಶೇಷ

01) ವಿಶ್ವ ಹಿಂದಿ ದಿನ

ವಿಶ್ವ ಹಿಂದಿ ದಿವಸ್ ಜನವರಿ 10 ರಂದು ಆಚರಿಸಲಾಗುವ ವಾರ್ಷಿಕ ಕಾರ್ಯಕ್ರಮವಾಗಿದೆ. 1949 ರಲ್ಲಿ ಯು-ಎನ್‌ಜಿಎಯಲ್ಲಿ ಹಿಂದಿಯನ್ನು ಮೊದಲು ಮಾತನಾಡಿದ ಸಂದರ್ಭವನ್ನು ಗುರುತಿಸಲು ವಿಶ್ವ ಹಿಂದಿ ದಿನವನ್ನು ರಚಿಸಲಾಯಿತು. ವಿಶ್ವಾದ್ಯಂತ ಸುಮಾರು 600 ಮಿಲಿಯನ್ ಭಾಷಿಕರನ್ನು ಹೊಂದಿರುವ ಹಿಂದಿ, ಮ್ಯಾಂಡರಿನ್ ಚೈನೀಸ್ ಮತ್ತು ಇಂಗ್ಲಿಷ್ ನಂತರ ವಿಶ್ವದ ಮೂರನೇ ಅತ್ಯಂತ ವ್ಯಾಪಕವಾಗಿ ಮಾತನಾಡುವ ಭಾಷೆಯಾಗಿದೆ.

## ಸುಭಾಷಿತ

ಉತ್ತಮವಾದುದು ಶ್ರಮವಿಲ್ಲದೇ ಲಭಿಸದು,
ಇಚ್ಛೆಯಿಲ್ಲದಿದ್ದರಂತೂ ಅದು ಸಾಧ್ಯವೇ ಇಲ್ಲ.

ಕುವೆಂಪು

# ಒಕ್ಕಲಿಗರನ್ನು ಕೆಣಕಿದರೆ 1993ರ ಪರಿಸ್ಥಿತಿ ಮರುಕಳಿಸುತ್ತೆ ಸರ್ಕಾರಕ್ಕೆ ನಿರ್ಮಲಾನಂದನಾಥ ಸ್ವಾಮೀಜಿ ನೇರ ಎಚ್ಚರಿಕೆ

**ಬೆಂಗಳೂರು: ಒಕ್ಕಲಿಗ ಸಮುದಾಯಕ್ಕೆ ಸಮಸ್ಯೆಯಾಗುವಂತಹ ಸಂದರ್ಭ ಬಂದರೆ 1993ರಲ್ಲಿ ನಡೆದಂತಹ ದೊಡ್ಡ ಹೋರಾಟಕ್ಕೆ ನಾಂದಿ ಆಗಲಿದೆ ಎಂದು ಆದಿಚುಂಚನಗಿರಿ ಮಠದ ಪೀಠಾಧ್ಯಕ್ಷರಾದ ಡಾ. ಶ್ರೀ ನಿರ್ಮಲಾನಂದನಾಥ ಸ್ವಾಮೀ-ಜಿಯವರು ಸರ್ಕಾರಕ್ಕೆ ನೇರ ಎಚ್ಚರಿಕೆ ನೀಡಿದರು.**



ಅರಮನೆ ಮೈದಾನದಲ್ಲಿಂದು ಫಸ್ಟ್ ಸರ್ಕಲ್ ವತಿಯಿಂದ ಹಮಿಕೊಂಡಿರುವ ಉದ್ಯಮಿ ಒಕ್ಕಲಿಗ ಎಕ್ಸ್ ಪೊ ಉದ್ಘಾಟನಾ ಕಾರ್ಯಕ್ರಮದಲ್ಲಿ ದಿವ್ಯ ಸಾನಿಧ್ಯ ವಹಿಸಿ ಮಾತನಾಡಿದರು. ವಿಧಾನಪರಿಷತ್‌ನ ಮಾಜಿ ಸಭಾಪತಿ ಬಿ.ಎಲ್.ಶಂಕರ್ ಅವರ ಕಡೆ ತಿರುಗಿ ಮಾತನಾಡಿದ ಶ್ರೀಗಳು, ಸುತ್ತಮುತ್ತಲೂ ನಡೆಯುತ್ತಿರುವ ವಿಚಾರ ಗಮನಿಸಿದರೆ 1993ರ ಇತಿಹಾಸ ಮರುಕಳಿಸಬಹುದು. ಆ ರೀತಿ ಮರುಕಳಿಸದ ಹಾಗೆ ನೋಡಿಕೊಳ್ಳಬೇಕಾದ ಜವಾಬ್ದಾರಿ ಇದೆ ಎಂದು ಸಲಹೆ ಮಾಡಿದರು. 1993 ರಲ್ಲಿ ಶ್ರೀ ಬಾಲಗಂಗಾಧರನಾಥ ಸ್ವಾಮೀ-ಜಿಯವರ ನೇತೃತ್ವದಲ್ಲಿ ಒಕ್ಕಲಿಗರ ಬೃಹತ್ ರ್ಯಾಲಿ ಅಥವಾ ಹೋರಾಟವನ್ನು ನಡೆಸಲಾಗಿ-ತ್ತು. ಅಂತಹ ಸಂದರ್ಭ ಸಮಸ್ಯೆ ಬಂದರೆ ಮತ್ತೆ ಆ ರೀತಿಯ ಹೋರಾಟ ಮರುಕಳಿಸಬಹುದು. ಅಂತಹ ಅವಕಾಶ ಆಗದಂತೆ ನೋಡಿಕೊಳ್ಳುವ ಜವಾಬ್ದಾರಿ ಸಮಕಾಲೀನ ವ್ಯವಸ್ಥೆ ಮೇಲಿದೆ ಎಂದು ನುಡಿದರು.

ಸಮುದಾಯದವರು ಅಂದಿಗಿಂತಲೂ ಇಂದು ಹೆಚ್ಚು ಪ್ರಜ್ಞಾವಂತರಾಗಿದ್ದಾರೆ. ಹೆಚ್ಚಿನ ಸೌಕರ್ಯಗಳೂ ಈಗಿವೆ. ಒಂದು ವೇಳೆ ಅಂತಹ ಪರಿಸ್ಥಿತಿ ಮರುಕಳಿಸಿದರೆ ದೊಡ್ಡ ಹೋರಾಟಕ್ಕೆ ನಾಂದಿಯಾಗಲಿದೆ. ಸಮುದಾಯದ ಬಗ್ಗೆ ನಾಳೆ ಹೆಚ್ಚು ಮಾತನಾಡುವುದಾಗಿ ಹೇಳಿದರು. ಒಕ್ಕಲಿಗ ಸಮುದಾಯದ ಎಲ್ಲಾ ವಲಯಗಳೂ ಒಗ್ಗೂಡಬೇಕು ಹಾಗೂ ಆಯಾ ವಲಯಗಳಲ್ಲಿ ಪ್ರವರ್ಧಮಾನಕ್ಕೆ ಬರಬೇಕು. ಯುವ ಸಮುದಾಯ ಯೋಜಿಸಿ, ಅಧ್ಯಯನ ಮಾಡಿ ಉದ್ದಿಮೆಯನ್ನು ಸ್ಥಾಪಿಸಬೇಕೇ ಹೊರತು ಪೂರ್ವಿಕರು ಉಳಿಸಿರುವ ಜಮೀನನ್ನು ಮಾರಿಕೊಂಡು ಶೋಕಿ ಮಾಡಬಾರದು, ಉದ್ಯಮ ಆರಂಭಿಸಿದ ಮೇಲೆ ಅದರ ಬೆಳವಣಿಗೆ ಕಡೆ ಗಮನ ಹರಿಸಬೇಕು. ನಷ್ಟ ಅನುಭವಿಸಬಾರದು ಎಂದು ಕಿವಿಮಾತು ಹೇಳಿದರು.

ಜ್ಞಾನ ಆಧಾರಿತ ಯುಗವಾಗಿದ್ದು ಬದುಕಿನಲ್ಲೂ ಸಾಕಷ್ಟು ಬದಲಾವಣೆ ಮಾಡಿಕೊಳ್ಳಬೇಕು. ಫಸ್ಟ್ ಸರ್ಕಲ್ ಆರಂಭಿಸಿರುವ ಉದ್ಯಮಿ ಒಕ್ಕಲಿಗ ಪರಿಕಲ್ಪನೆ ಚೆನ್ನಾಗಿದ್ದು, ಉದ್ಯಮ ಕ್ಷೇತ್ರದಲ್ಲಿ ದೂರದೃಷ್ಟಿ ಕೊಟ್ಟು ಜೊತೆಗೆ ಕರೆದೊಯ್ಯುತ್ತಿರುವುದಕ್ಕೆ ಅಭಿನಂದನೆ ಸಲ್ಲಿಸಬೇಕು. ಸಮುದಾಯ ಕೇವಲ ಒಂದು ವಲಯದಲ್ಲಿ ಅಲ್ಲ, ಎಲ್ಲಾ ವಲಯದಲ್ಲೂ ಒಗ್ಗೂಡಿ ಕೆಲಸ ಮಾಡಿದಾಗ ಮಾತ್ರ ನಿರೀಕ್ಷಿತ ಫಲ ದೊರೆಯಲಿದೆ. ಫಸ್ಟ್ ಸರ್ಕಲ್ ಇನ್ನಷ್ಟು ಎತ್ತರಕ್ಕೆ ಬೆಳೆದು ಪ್ರವರ್ಧಮಾನಕ್ಕೆ ಬರಬೇಕು ಎಂದು ಹಾರೈಸಿದರು. ನಾಡಪ್ರಭು ಕೆಂಪೇಗೌಡರು ನಮ ಸಮುದಾಯದ ಐಕಾನ್ ಆಗಿದ್ದಾರೆ. ಹಾಗೆಂದು ಅವರು ಕತ್ತಿ ಹಿಡಿದಿದ್ದರು ಎಂದು ನಾವೂ ಕತ್ತಿ ಹಿಡಿದು ಓಡಾಡಲಾಗುವುದಿಲ್ಲ. ಪರಿಸ್ಥಿತಿ ಮತ್ತು ಕಾಲಕ್ಕೆ ತಕ್ಕಂತೆ ಬದುಕಿನಲ್ಲಿ ಬದಲಾವಣೆ ಮಾಡಿಕೊಳ್ಳಬೇಕಾದ ಅಗತ್ಯವಿದೆ ಎಂದು ಸಲಹೆ ನೀಡಿದರು.

## ಯುವ ಪತ್ರಕರ್ತ,ಕಲಾವಿದ ಶಶಿಕುಮಾರ್ ಲಕ್ಷ್ಮಿಗೆ ಒಲಿದು ಬಂದ ರಾಷ್ಟ್ರಮಟ್ಟದ ಕಾಯಕ ರತ್ನ ಪ್ರಶಸ್ತಿ

ನೈಜ್ಯ ದೆಸೆ ನ್ಯೂಸ್

**ಲಿಂಗಸಗೂರು: ಜ10 ಪತ್ರಕರ್ತ ,ನಿರೂಪಕ ಹಾಗೂ ಕಲಾವಿದ ಶಶಿಕುಮಾರ್ ಲಕ್ಷ್ಮಿ ಅವರು ರಾಷ್ಟ್ರಮಟ್ಟದ ಕಾಯಕ ರತ್ನ ಪ್ರಶಸ್ತಿಗೆ ಆಯ್ಕೆಯಾಗಿದ್ದಾರೆ.**



ಶನಿವಾರ ಜ 10 ರಂದು ಐ.ಎಂ.ಐ ಹಾಲ್ ಲಿಂಗಸಗೂರಿನಲ್ಲಿ ನಡೆಯುವ ಕಾರುಣ್ಯ ನೆಲೆ ವೃದ್ಧಾಶ್ರಮ ಹಾಗೂ ಸ್ವಾಮಿ ಚಾರಿಟೇಬಲ್ ಟ್ರಸ್ಟ್ ವತಿಯಿಂದ ಡಾ.ಮಲ್ಲಿಕಾರ್ಜುನ ಹಿರೇಮಠ ಅವರಿಗೆ ಅಭಿನಂದನಾ ಸಮಾರಂಭ ಮತ್ತು ಚಿಂತನೆಗಳ ಸಂಗ್ರಹ ಕೃತಿ ಬಿಡುಗಡೆ ಹಾಗೂ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಶಶಿಕುಮಾರ್ ಲಕ್ಷ್ಮಿ ಅವರಿಗೆ ಅವರ ಸಮಾಜಮುಖಿ ಸೇವೆ ಹಾಗೂ ಪ್ರತಿಭೆಯನ್ನು ಗುರುತಿಸಿ ರಾಷ್ಟ್ರಮಟ್ಟದ ಕಾಯಕ ರತ್ನ ಪ್ರಶಸ್ತಿ ನೀಡಿ ಗೌರವಿಸಲಾಗುತ್ತದೆ. ಎಂದು ಉಮಾದೇವಿ ಹಿರೇಮಠ ಸಂಸ್ಥಾಪಕ ಸ್ವಾಮಿ ಚಾ-ರಿಟೇಬಲ್ ಟ್ರಸ್ಟ್, ಅಮರಯ್ಯಸ್ವಾಮಿ ಹರೇಟನೂರ ಅಧ್ಯಕ್ಷ ಕಾರುಣ್ಯ ನೆಲೆ ವೃದ್ಧಾಶ್ರಮ ಇವರು ತಿಳಿಸಿದ್ದಾರೆ.

# ಜ 11 ಜವಾರಿ ಜರ್ನಿ ಕೃತಿ ಲೋಕಾರ್ಪಣೆ




ನೈಜ್ಯ ದೆಸೆ ನ್ಯೂಸ್

**ಸಿಂಧನೂರು: ಕೋಲಕಾರ ಫ್ಯಾಮಿಲಿ ಟ್ರಸ್ಟ್ ಪ್ರಕಾಶನ ಜಾಲಹಳ್ಳಿ ರವರ ವತಿಯಿಂದ ಲೇಖಕ ಡಾ. ಮಲ್ಲಿಕಾರ್ಜುನ ಕಮತಗಿ ರವರು ರಚಿಸಿದ ಜವಾರಿ ಜರ್ನಿ ಕೃತಿ ಜ 11 ರವಿವಾರದಂದು ಸಿಂಧನೂ-ರಿನ ಎಲ್. ಬಿ. ಕೆ ಮತ್ತು ನೊಬಲ್ ಪದವಿ ಪೂರ್ವ ಕಾಲೇಜಿನಲ್ಲಿ ಬೆಳಗ್ಗೆ 10:00 ಗಂಟೆಗೆ ಲೋಕಾರ್ಪಣೆಗೊಳ್ಳಲಿದೆ ಎಂದು ಆಯೋಜಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಈ ಕಾರ್ಯಕ್ರಮವನ್ನು ಸಿದ್ದಯ್ಯ ಪುರಾಣಿ ಟ್ರಸ್ಟ್ ಕೊಪ್ಪಳ ಇದರ ಅಧ್ಯಕ್ಷರಾದ ಶ್ರೀ ಅಜ್ಮೀರ್ ನಂದಾಪುರ ರವರು ಉದ್ಘಾಟಿಸಲಿದ್ದಾರೆ.**

ಪುಸ್ತಕ ಪ್ರಕಾಶಕರಾದ ಶ್ರೀ ರಾಘವೇಂದ್ರ ಕೋಲ್ಕಾರ್ ಜಾಲಹಳ್ಳಿ ರವರು ಅಧ್ಯಕ್ಷತೆ ವಹಿಸಲಿದ್ದಾರೆ. ಕರ್ನಾಟಕ ಸಾಹಿತ್ಯ ಅಕ್ಯಾಡೆಮಿ ಸದಸ್ಯರಾದ ಡಾ.ಸಿ. ಬಿ. ಚಿಲ್ಕರಾಗಿ ಗೌರವ ಉಪಸ್ಥಿತ-ರಿರುವರು ವಿಜಡಮ್ ಕಾಲೇಜಿನ ಪ್ರಾಂಶುಪಾಲರು ಹಾಗೂ ಸಾಹಿತಿಗಳಾದ ಡಾ. ಶರೀಫ್ ಹಸಮಲ್ ರವರು ತೃತೀಯ ಬಗ್ಗೆ ಮಾತನಾಡಲಿದ್ದಾರೆ.

ಮುಖ್ಯ ಅತಿಯಾಗಿ ಶ್ರೀ ವೀರಭದ್ರಯ್ಯ ಜಿ. ಎಂ ಸಹಕಾರ ಸಂಘಗಳ ಸಹಾಯಕ ನಿಬಂಧಕರು ಸಿಂಧನೂರು, ಆಕ್ಸಫರ್ಡ್ ಸಮೂಹ ಶಿಕ್ಷಣ ಸಂಸ್ಥೆಯ ಅಧ್ಯಕ್ಷರಾದ ಶ್ರೀ ಸತ್ಯನಾರಾಯಣ ಶ್ರೇಷ್ಠಿ, ಕನ್ನಡ ಸಾಹಿತ್ಯ ಸಿಂಧನೂರಿನ ಅಧ್ಯಕ್ಷರಾದ ಶ್ರೀ ಎಚ್‌ಎಫ್ ಮಸ್ಕಿ, ಸುರಪುರದ ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷರಾದ ಶ್ರೀ ಶರಣಬಸವ ಯಾಳವಾರ ದಲಿತ ಸಾಹಿತ್ಯ ಪರಿಷತ್ತು ಸಿಂಧನೂರು ತಾಲೂಕು ಘಟಕದ ಅಧ್ಯಕ್ಷರಾದ ಶ್ರೀ ಹುಸೇನಪ್ಪ ಅಮರಾಪುರ, ಶ್ರೀ ಹೊಳೆಪ್ಪ ಕಮತಗಿ ರವರು ಅತಿಥಿಗಳಾಗಿ ಆಗಮಿಸುತ್ತಿದ್ದಾರೆ. ಡಾಕ್ಟರ್ ಅರುಣ್ ಕುಮಾರ್ ಬೇರಗಿ ಕನ್ನಡ ಉಪನ್ಯಾಸಕರು ಪ್ರಾಸ್ತಾವಿಕ ಮಾತನಾಡಲಿದ್ದಾರೆ. ಆದಕಾರಣ ಎಲ್ಲಾ ಸಾಹಿತ್ಯ ಆಸಕ್ತರು ಈ ಕಾರ್ಯಕ್ರಮಕ್ಕೆ ಆಗಮಿಸಿ ಯಶಸ್ವಿಗೊಳಿಸಬೇಕೆಂದು ಕೋರಲಾಗಿದೆ.

# ಅಬಕಾರಿ ಅಧಿಕಾರಿ ಲಕ್ಷೀದೇವಿ ಅಮಾನತ್ತಿಗೆ ಒತ್ತಾಯ

ನೈಜ್ಯ ದೆಸೆ ನ್ಯೂಸ್

**ಲಿಂಗಸಗೂರು: ಜ 10 ತಾಲೂಕಿನಲ್ಲಿ ಅಕ್ರಮ ಮದ್ಯ ಮಾರಾಟ ನಿಯಂತ್ರಿಸುವಲ್ಲಿ ಅಬಕಾರಿ ಇಲಾಖೆ ವಿಫಲವಾಗಿದೆ ಎಂದು ಆರೋಪಿಸಿ, ಲಿಂಗಸಗೂರು ಅಬಕಾರಿ ವಲಯದ ಸರ್ಕಲ್ ಇನ್ಸ್ಪೆಕ್ಟರ್ ಲಕ್ಷ್ಮೀದೇವಿ ಅವರ ವಿರುದ್ಧ ಕ್ರಮ ಕೈಗೊಳ್ಳಬೇಕೆಂದು ವಿವಿಧ ಸಂಘಟನೆಗಳ ಮುಖಂಡರು ಸಹಾಯಕ ಆಯುಕ್ತರ ಮೂಲಕ ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಿದ್ದಾರೆ.**




ನಗರ ಹಾಗೂ ಗ್ರಾಮೀಣ ಪ್ರದೇಶಗಳಲ್ಲಿ ಅಕ್ರಮ ಮದ್ಯ ಮಾರಾಟ ಹೆಚ್ಚಾಗಿದ್ದು, ಇದರಿಂದ ಸಾರ್ವಜನಿಕ ಶಾಂತಿ ಕದಡುವ ಸ್ಥಿತಿ ನಿರ್ಮಾಣವಾಗಿದೆ ಎಂದು ದೂರಿನಲ್ಲಿ ಉಲ್ಲೇಖಿಸಲಾಗಿದೆ. ದೂರು ನೀಡಿದವರ ಮಾಹಿತಿಯನ್ನು ಬಹಿರಂಗಪಡಿಸಿ ಬೆದರಿಕೆ ಹಾಕಲಾಗುತ್ತಿದೆ ಎಂಬ ಆರೋಪವೂ ಕೇಳಿಬಂದಿದೆ. ಈ ಹಿನ್ನೆಲೆಯಲ್ಲಿ ಸಂಬಂಧಿಸಿದ ಅಧಿಕಾ-ರಿಯನ್ನು ಅಮಾನತು ಮಾಡಿ ತನಿಖೆ ನಡೆಸಬೇಕು ಹಾಗೂ ದೂರುದಾರ-ರಿಗೆ ರಕ್ಷಣೆ ಒದಗಿಸಬೇಕು ಎಂದು ಸಂಘಟನೆಗಳು ಆಗ್ರಹಿಸಿವೆ. ಮನವಿಗೆ ಸ್ಪಂದಿಸದಿದ್ದರೆ ಅಬಕಾರಿ ಇಲಾಖೆಯ ವಿರುದ್ಧ ಹೋರಾಟ ನಡೆಸುವುದಾಗಿ ಎಚ್ಚರಿಕೆ ನೀಡಿದ್ದಾರೆ.

# ಸರ್ಕಾರಿ ನೌಕರರ ಕ್ರೀಡಾಕೂಟಕ್ಕೆ ಚಾಲನೆ

ನೈಜ್ಯ ದೆಸೆ ನ್ಯೂಸ್

**ರಾಯಚೂರು: ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಹಾಗೂ ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ ಸಹಯೋಗದಲ್ಲಿ ನಗರದ ಮಹಾತ್ಮಾ ಗಾಂಧಿ ಜಿಲ್ಲಾ ಕ್ರೀಡಾಂಗಣದಲ್ಲಿ ಎರಡು ದಿನಗಳ ಜಿಲ್ಲಾ ಮಟ್ಟದ ರಾಜ್ಯ ಸರ್ಕಾರಿ ನೌಕರರ ಕ್ರೀಡಾಕೂಟ ಮತ್ತು ಸಾಂಸ್ಕೃತಿಕ ಸ್ಪರ್ಧೆಗಳು ಆರಂಭವಾದವು.**



ಹೆಚ್ಚುವರಿ ಜಿಲ್ಲಾಧಿಕಾರಿ ಶಿವಾನಂದ ಭಜಂತ್ರಿ ಚಾಲನೆ ನೀಡಿದರು. ಮಹಿಳಾ ಕ್ರೀಡಾಪಟುಗಳಿಂದ ಕ್ರೀಡಾಜ್ಯೋತಿ ಬೆಳಗಿಸಿದರು. 'ಜಿಲ್ಲೆಯಿಂದ ಒಟ್ಟು 1266 ನೌಕರರು ಕ್ರೀಡಾಕೂಟಕ್ಕೆ ನೋಂದಣಿ ಮಾಡಿಸಿಕೊಂಡಿದ್ದಾರೆ' ಎಂದು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರಾದ ವಿರೇಶ್ ನಾಯಕ ತಿಳಿಸಿದರು.

ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ಜಿಲ್ಲಾ ಘಟಕದ ಅಧ್ಯಕ್ಷ ಕೃಷ್ಣ ಶಾವಂತಗೇರಾ, ಸಂಘದ ರಾಜ್ಯ ಕಾರ್ಯದರ್ಶಿ ಡಾ.ಶಂಕರಗೌಡ ಎಸ್.ಪಾಟೀಲ, ಮಹಾನಗರ ಪಾಲಿಕೆಯ ಉಪ ಆಯುಕ್ತೆ ಸಂತೋಷರಾಣಿ, ಮುಖಂಡರಾದ ಹಾಜಿಬಾಬು, ದೊಡ್ಡ ನಿಂಗಪ್ಪ, ಭೀಮರಾಜ ಹವಾಲ್ದಾರ್, ಹನುಮಂತ್ರಾಯ, ಆರೀಫ್ ಮಿಯಾ, ಸುರೇಶ ಕುರ್ಡಿ, ಪಂಪಾಪತಿ ಹೂಗಾರ, ಭೀಮೇಶ ನಾಯಕ ಉಪಸ್ಥಿತರಿದ್ದರು.

# ಗಣರಾಜ್ಯೋತ್ಸವಕ್ಕೆ ಅಗತ್ಯ ಸಿದ್ಧತೆಯಾಗಲಿ; ಅಪರ ಜಿಲ್ಲಾಧಿಕಾರಿ ಶಿವಾನಂದ ಸೂಚನೆ

ನೈಜ್ಯ ದೆಸೆ ನ್ಯೂಸ್

**ರಾಯಚೂರು: ಜನವರಿ 09 (ಕರ್ನಾಟಕ ವಾರ್ತೆ): ನಗರದ ಮಹಾತ್ಮ ಗಾಂಧೀಜಿ ಜಿಲ್ಲಾ ಕ್ರೀಡಾಂಗಣದಲ್ಲಿ ಜನವರಿ 26ರಂದು ಜರುಗುವ ಗಣರಾಜ್ಯೋತ್ಸವ ಆಚರಣೆಗೆ ಅಗತ್ಯ ಸಿದ್ಧತೆ ಮಾಡಿಕೊಳ್ಳಬೇಕು ಎಂದು ಅಪರ ಜಿಲ್ಲಾಧಿಕಾರಿಗಳಾದ ಶಿವಾನಂದ ಅವರು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು.**



ಜನವರಿ 09ರ ಶುಕ್ರವಾರ ನಗರದ ನೂತನ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ನಡೆದ ಗಣರಾಜ್ಯೋತ್ಸವ ಆಚರಣೆಯ ಪೂರ್ವಭಾವಿ ಸಿದ್ಧತಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಕಾರ್ಯಕ್ರಮದಲ್ಲಿ ಶಿಷ್ಟಾಚಾರ ಉಲ್ಲಂಘನೆ ಆಗದಂತೆ ಎಲ್ಲಾ ಅಧಿಕಾರಿಗಳು ಎಚ್ಚರವಹಿಸಬೇಕು. ಗಣ-ರಾಜ್ಯೋತ್ಸವ ಕಾರ್ಯಕ್ರಮದ ಕುರಿತು ಆಹ್ವಾನ ಪತ್ರಿಕೆಗಳನ್ನು ಶಿಷ್ಟಾಚಾರದಂತೆ ಮುದ್ರಿಸಿ, ಜಿಲ್ಲೆಯ ಎಲ್ಲಾ ಜನಪ್ರತಿನಿಧಿಗಳಿಗೆ ತಲುಪಿಸಬೇಕು. ಕಾರ್ಯಕ್ರಮದಲ್ಲಿ ಪೊಲೀಸ್, ಗೃಹ ರಕ್ಷಕ, ಎನ್.ಸಿ.ಸಿ., ಸ್ಕೌಟ್ಸ್ ಮತ್ತು ಗೈಡ್ಸ್ ತಂಡಗಳಿಂದ ಆಕರ್ಷಕ ಪಥ ಸಂಚಲನ ಏರ್ಪಡಿಸುವಂತೆ ಹಾಗೂ ವಿದ್ಯಾರ್ಥಿಗಳಿಂದ ಸಾಂಸ್ಕೃತಿಕ ಕಾರ್ಯಕ್ರಮ ಆಯೋಜಿಸುವಂತೆ ಸಂಬಂಧಿಸಿದ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಕಾರ್ಯಕ್ರಮವನ್ನು ವ್ಯವಸ್ಥಿತವಾಗಿ ಆಯೋಜಿಸುವ ನಿಟ್ಟಿನಲ್ಲಿ ವಿವಿಧ ಅಧಿಕಾರಿಗಳ ನೇತೃತ್ವದಲ್ಲಿ ಹಲವು ಸಮಿತಿ ರಚಿಸಲಾಗಿದ್ದು, ಎಲ್ಲಾ ಸಮಿತಿಯ ಸದಸ್ಯರು ತಮ್ಮ ಜವಾಬ್ದಾರಿಯನ್ನು ಅರಿತು ಸಮನ್ವಯದಿಂದ ಯಾವುದೇ ಲೋಪವಾಗದಂತೆ ಎಚ್ಚರಿಕೆಯಿಂದ ಕಾರ್ಯನಿರ್ವಹಿಸುವಂತೆ ಹಾಗೂ ಗಣರಾಜ್ಯೋತ್ಸವ ಕಾರ್ಯಕ್ರಮದ ಅಂಗವಾಗಿ ಎಲ್ಲಾ ಸರ್ಕಾರಿ ಕಚೇರಿಗಳನ್ನು ವಿದ್ಯುತ್ ದೀಪಾಲಂಕಾರ ಮಾಡುವಂತೆ ಮತ್ತು ಕ್ರೀಡಾಂಗಣದಲ್ಲಿ ನಡೆಯುವ ಕಾರ್ಯಕ್ರಮದಲ್ಲಿ ಎಲ್ಲಾ ಇಲಾಖೆಗಳ ಅಧಿಕಾರಿಗಳು ಮತ್ತು ಸಿಬ್ಬಂದಿ ಕಡ್ಡಾಯವಾಗಿ ಭಾಗವಹಿಸುವಂತೆ ಸೂಚಿಸಿದರು. ಅಂದು ಬೆಳಿಗ್ಗೆ 9 ಗಂಟೆಗೆ ನಗರದ ಜಿಲ್ಲಾ ಕ್ರೀಡಾಂಗಣದಲ್ಲಿ ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಹಾಗೂ ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಶರಣಪ್ರಕಾಶ್ ರುದ್ರಪ್ಪ ಪಾಟೀಲ್ ಅವರು ರಾಷ್ಟ್ರ ಧ್ವಜಾರೋಹಣ ನೆರವೇ-ರಿಸಲಿದ್ದು, ಆಕರ್ಷಕ ಪಥಸಂಚಲನ ನಡೆಯಲಿದೆ.

ಶಾಲಾ ವಿದ್ಯಾರ್ಥಿಗಳಿಂದ ಸಾಮೂಹಿಕ ನೃತ್ಯ ಕಾರ್ಯಕ್ರಮ ನಡೆಯಲಿದ್ದು, ಸಂಜೆ ನಗರದ ಪಂಡಿತ ಸಿದ್ಧರಾಮ ಜಂಬಲದಿನ್ನಿ ರಂಗಮಂದಿರದಲ್ಲಿ ವಿದ್ಯಾರ್ಥಿಗಳಿಂದ ಸಾಂಸ್ಕೃತಿ-ಕ ಕಾರ್ಯಕ್ರಮ ನಡೆಯಲಿವೆ ಎಂದರು.

ಎಲ್ಲಾ ಸರ್ಕಾರಿ ಕಚೇರಿಗಳಲ್ಲಿ ಧ್ವಜಾರೋಹಣ: ಗಣ-ರಾಜ್ಯೋತ್ಸವ ಅಂಗವಾಗಿ ಜ.26ರಂದು ಜಿಲ್ಲೆಯ ಎಲ್ಲಾ ಸರ್ಕಾರಿ ಕಚೇರಿಗಳಲ್ಲಿ ಧ್ವಜಾರೋಹಣ ನೆರವೇ-ರಿಸಬೇಕು. ಈ ಕುರಿತು ಸಂಬಂಧಿಸಿದ ಇಲಾಖೆಯ ಅಧಿಕಾರಿಗಳು ಜವಾಬ್ದಾರಿ ವಹಿಸಿಕೊಳ್ಳಬೇಕು. ಅಲ್ಲದೆ ಜಿಲ್ಲಾ ಕ್ರಿಡಾಂಗಣದಲ್ಲಿ ಧ್ವಜಾರೋಹಣ ಕಾರ್ಯಕ್ರಮಕ್ಕಾಗಿ ಶಾಮಿಯಾನ, ಮೈಕ್ ಸೆಟ್, ಆಸನ ವ್ಯವಸ್ಥೆ, ಫ್ಲೆಕ್ಸ್ ಬ್ಯಾನರ್ ವ್ಯವಸ್ಥೆ ಮಾಡಬೇಕು ಎಂದರು. ತೋಟಗಾರಿಕೆ ಇಲಾಖೆಯಿಂದ ಧ್ವಜಾರೋಹಣ ಕಾರ್ಯಕ್ರಮಕ್ಕೆ ಹೂವಿನ ಪಾಟ್‌ನೊಂದಿಗೆ ಅಲಂಕರಿಸಬೇಕು.

ಯುವಜನ ಸೇವಾ ಮತ್ತು ಕ್ರೀಡಾ ಇಲಾಖೆಯು ರಂಗೋಲಿ, ಪತ್ರಿಕಾಗೋಷ್ಠಿಗೆ ಸ್ಥಳವಕಾಶ ಹಾಗೂ ಇನ್ನಿತರ ವ್ಯವಸ್ಥೆ ಮಾಡಬೇಕು ಎಂದರು. ಗಣರಾಜ್ಯೋತ್ಸವ ಕಾರ್ಯಕ್ರಮದ ಫರೇಡ್ ಪೂರ್ವಭಾವಿ ತಯಾರಿಗೆ ಆಗಮಿಸುವ ಶಾಲಾ ಕಾಲೇಜು ವಿದ್ಯಾರ್ಥಿಗಳಿಗೆ, ಪೊಲೀಸ್ ಮತ್ತು ಇತರೆ ಸಿಬ್ಬಂದಿಗೆ ಉಪಹಾರ ಹಾಗೂ ಚಹಾದ ವ್ಯವಸ್ಥೆ ಮತ್ತು ಕುಡಿಯುವ ನೀರಿನ ವ್ಯವಸ್ಥೆಯನ್ನು ಸಂಬಂಧಿಸಿದ ಇಲಾಖೆಯ ಅಧಿಕಾರಿಗಳು ಮಾಡಬೇಕೆಂದು ಸೂಚಿಸಿದರು.

ಇದೇ ಸಂದರ್ಭದಲ್ಲಿ ರಾಯಚೂರು ತಹಶೀಲ್ದಾರ್ ಸುರೇಶ ವರ್ಮ, ಅಬಕಾರಿ ಇಲಾಖೆಯ ಉಪ ಆಯುಕ್ತರಾದ ಮಹೇಂದ್ರ ಕುಮಾರ್, ರಾಯಚೂರು ಸಹಾಯಕ ಆಯುಕ್ತರ ಕಚೇರಿಯ ತಹಶೀಲ್ದಾರ್ ರಾಜಶೇಖರ, ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕ ವ್ಯವಹಾರಗಳ ಇಲಾಖೆಯ ಉಪ ನಿರ್ದೇಶಕರಾದ ನಜೀರ್ ಅಹ್ಮದ್, ತೋಟಗಾ-ರಿಕೆ ಇಲಾಖೆಯ ಉಪ ನಿರ್ದೇಶಕರಾದ ಮಹಮದ್ ಅಲಿ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರಾದ ವಿರೇಶ ನಾಯಕ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿ ಸುನೀತಾ ಕಾಂಬಳೆ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರಾದ ಉತ್ತರಾದೇವಿ, ಭಾರತ ಸೇವಾ ದಳದ ವಿದ್ಯಾ ಸಾಗರ್ ಸೇರಿದಂತೆ ಜಿಲ್ಲಾಧಿಕಾರಿಗಳ ಕಚೇ-ರಿಯ ಸಿಬ್ಬಂದಿ ವೇಣುಮಾಧವ್, ಮಲ್ಲೇಶ ಇದ್ದರು.

## ಸಾಹಿತ್ಯ ಸಿಂಚನ

ಹೆಣ್ಣಿನ ಲೋಕ

ಹೆಣ್ಣು ಎಂದರೆ ಹೂವಿನ ಹಾಗೆ ,
ಹೂವು ಎಷ್ಟು ಮೃದುವಾಗಿ ಸುಂದರವಾಗಿ ಇರುತ್ತದೆಯೋ,
ಅದೇ ತರಹ ಮನಸ್ಸು ಹೊಂದಿದವಳು ಹೆಣ್ಣಾಗಿರುತ್ತಾಳೆ

ಹೆಣ್ಣಿನ ಬುದ್ಧಿ ಮೊಣಕಾಲು ಕೆಳಗೆ
ಎಂದರೆ ಇಂದಿನ ಲೋಕದಲ್ಲಿ
ಮದರ್ ತೆರೇಸಾ, ಸಾವಿತ್ರಿಬಾಯಿ ಫುಲೆ ಯಾರೂ ಕೂಡ ಸಾಧನೆ
ಮಾಡಲು ಸಾಧ್ಯವಿಲ್ಲ ವಾಗಿತ್ತು

ಹೆಣ್ಣು ಎಂದರೆ ಸದ್ಗುಣ , ದಿವ್ಯ ಗುಣ,
ಹೊಂದಿದ ಮನಸ್ಸು
ಯಾವ ಹೆಣ್ಣು ಗುಣವಂತೆಯಾಗಿ...
ತನ್ನ ಕರ್ತವ್ಯ, ಧರ್ಮನಿಷ್ಠೆ ,ಮೌನ, ತಾಳ್ಮೆ
ಹೊಂದಿದವಳೇ ಹೆಣ್ಣು
ಅವಳೇ ನಿಜವಾದ ಹೆಣ್ಣು,

ಯಾಸೀನಾ ಇರ್ಫಾನ್ ಸಿಂಧನೂರು

# ಅಡವಿ ಸಿದ್ದೇಶ್ವರ ರಥೋತ್ಸವಕ್ಕೆ ಸಿದ್ಧತೆ

ನೈಜ್ಯ ದೆಸೆ ನ್ಯೂಸ್



**ಊಟಕನೂರು: ಬಸವಲಿಂಗ ದೇಶೀಕೇಂದ್ರ ಮಹಾ ಶಿವಯೋಗಿಗಳ 161ನೇ ಹಾಗೂ ಮರಿಬಸವಲಿಂಗ ದೇಶೀಕೇಂದ್ರ ಸ್ವಾಮೀಜಿಯ 35ನೇ ಪುಣ್ಯಸ್ಮರಣೆ ಅಂಗವಾಗಿ ಸಮೀಪದ ಉಟಕನೂರು ಗ್ರಾಮದಲ್ಲಿ ಜ.11 ರಂದು ಜರುಗುವ ಅಡವಿ ಸಿದ್ದೇಶ್ವರ ಮಠದ 35ನೇ ಜಾತ್ರಾ ಮಹೋತ್ಸವಕ್ಕೆ ಸಕಲ ಸಿದ್ದತೆ ಕೈಗೊಳ್ಳಲಾಗಿದೆ.**

ನೂತನವಾಗಿ ನಿರ್ಮಿಸಿದ ಬೃಹತ್ ಗಾತ್ರದ ರಥ ಈ ವರ್ಷದ ಮಹಾ ರಥೋತ್ಸವಕ್ಕೆ ಮೆರಗು ತರಲಿದೆ, ಜ.10 ರಂದು ಬಸವಲಿಂಗ ಶಿವಯೋಗಿಗಳ ಪುರಾಣ ಪ್ರವಚನ ಮಹಾಮಂಗಲ, ಮರಿಬಸವಲಿಂಗ ಸ್ವಾಮೀಜಿ ಚರಿತ್ರೆ ಲೋಕಾರ್ಪಣೆ, ಅಲಂಕೃತ ಜೋಡೆತ್ತುಗಳ ಮೆರವಣಿಗೆ, ರೈತರಿಗೆ ಸನ್ಮಾನ ನಡೆಯಲಿದೆ. ಕವಿತಾಳ ಸಮೀಪದ ಊಟಕನೂರು ಮಠದ ಆವರಣದಲ್ಲಿ ನಿರ್ಮಿಸಿದ ನೂತನ ಶಿಲಾ ಮಂಟಪ ಜ.11 ರಂದು ಅಗಣಿತ ಲೀಲಾ ಮೂರ್ತಿ ಗ್ರಂಥದ ಅಂಬಾರಿ ಮೆರವಣಿಗೆ, ಬೆಳಿಗ್ಗೆ 10 ಗಂಟೆಗೆ ಮಹಿಳೆಯರಿಂದ ಹೂವಿನ ರಥೋತ್ಸವ ಹಾಗೂ ಸಂಜೆ ನೂತನ ಮಹಾ ರಥೋತ್ಸವ ಜರುಗುವುದು ಈ ವರ್ಷದ ವಿಶೇಷ.

ಕತೃ ಗದ್ದುಗೆಗೆ ಮಹಾ ರುದ್ರಾಭಿಷೇಕ, ಸಹಸ್ರ ಬಿಲ್ವಾರ್ಚನೆ, ಮಹಾ ಮಂಗಳಾರತಿ ಸೇರಿದಂತೆ ವಿಶೇಷ ಪೂಜೆ, ನೂತನ ರಥೋತ್ಸವದ ಕಳಸಾರೋಹಣ, ಜಂಗಮ ಗಣಾರಾಧನೆ, ದಾಸೋಹ, ಮತ್ತು ಪಲ್ಲಕ್ಕಿ ಉತ್ಸವ ವಿಜೃಂಭಣೆಯಿಂದ ಜರುಗುತ್ತದೆ. ಮರಿಬಸವರಾಜ ದೇಶೀಕೇಂದ್ರ ಶಿವಾಚಾರ್ಯ ಸ್ವಾಮೀಜಿಮರಿಬಸವರಾಜ ದೇಶೀಕೇಂದ್ರ ಸ್ವಾಮೀಜಿ ಉಟಕನೂರುಸಿಂಧನೂರು ತಾಲ್ಲೂಕಿನ ಅಲಬನೂರು ಗ್ರಾಮದ ಮಹಿಳೆಯರು ಗೃಹಲಕ್ಷ್ಮಿ ಹಣದಲ್ಲಿ ಉಳಿತಾಯ ಮಾಡಿ ಅಂದಾಜು 10 ಲಕ್ಷ ಮೊತ್ತದ ಬೆಳ್ಳಿ ಕಳಸವನ್ನು ದೇಣಿಗೆ ನೀಡಿದ್ದಾರೆ.

ಶರಣು ಸಾಹುಕಾರ ಚಿಂಚಿರಿಕಿ ಶರಣು ಸಾಹುಕಾರ ಚಿಂಚಿರಿಕಿ ಉದ್ಯಮಿ ಕಾಂಗ್ರೆಸ್ ಮುಖಂಡ ಮರಿಬಸವಲಿಂಗ ಸ್ವಾಮೀಜಿಗಳು ಪವಾಡ ಪುರುಷರಾಗಿ ಭಕ್ತರ ಮನದಲ್ಲಿ ಸದಾ ನೆಲೆಸಿದ್ದಾರೆ ಶ್ರೀಮಠದ ಕೃಪೆಯಿಂದ ನೆಮ್ಮದಿ ಬದುಕು ನಮ್ಮದಾಗಿದೆ ವಿವಿಧ ಮಠಾಧೀಶರು ಭಾಗಿ ಮಠದ ಪೀಠಾಧಿಪತಿ ಮರಿಬಸವರಾಜ ದೇಶೀಕೇಂದ್ರ ಶಿವಾಚಾರ್ಯರ ಉಪಸ್ಥಿತಿಯಲ್ಲಿ ನಡೆಯುವ ರಥೋತ್ಸವದಲ್ಲಿ ಬಿಚ್ಚಾಲಿ ಬೃಹನ್ಮಠದ ವೀರತಪಸ್ವಿ ವೀರಭದ್ರ ಶಿವಾಚಾರ್ಯ ಸ್ವಾಮೀಜಿ ನಿಲೋಗಲ್ ಮಠದ ಪಂಚಾಕ್ಷರಿ ಶಿವಾಚಾರ್ಯ ಸ್ವಾಮೀಜಿ ವಳ ಬಳ್ಳಾರಿ ವಿರಕ್ತಮಠದ ಸಿದ್ದಲಿಂಗ ಸ್ವಾಮೀಜಿ ಬಳಗಾನೂರು ಹಳೆಕೋಟಿ ಮಠದ ಮಲ್ಲಿಕಾರ್ಜುನ ಸ್ವಾಮೀಜಿ ದೇವದುರ್ಗ ಶಿಖರಮಠದ ಕಪಿಲ ಸಿದ್ದರಾಮೇಶ್ವರ ಸ್ವಾಮೀಜಿ ಶಾಂತಮಲ್ಲ ಶಿವಾಚಾರ್ಯ ಸ್ವಾಮೀಜಿ ಅಭಿನವ ರಾಚೋಟಿವೀರ ಶಿವಾಚಾರ್ಯ ಸ್ವಾಮೀಜಿ ಚನ್ನಮಲ್ಲ ಸ್ವಾಮೀಜಿ ಗುರುಬಸವ ಸ್ವಾಮಿ ಮಹಾಂತಲಿಂಗ ಶಿವಾಚಾರ್ಯ ಸ್ವಾಮೀಜಿ ವಿರೂಪಾಕ್ಷ ಪಂಡಿತಾರಾಧ್ಯ ಸ್ವಾಮೀ ಸೋಮನಾಥ ಶಿವಾಚಾರ್ಯ ಸ್ವಾಮೀಜಿ ಮಹಾಲಿಂಗ ಸ್ವಾಮೀಜಿ ತೋಂಟದಾರ್ಯ ಸ್ವಾಮೀಜಿ ಶಂಭು ಸೋಮನಾಥ ಶಿವಾಚಾರ್ಯ ಸ್ವಾಮೀಜಿ ಶಿವಯೋಗಿ ಶಿವಾಚಾರ್ಯ ಸ್ವಾಮೀಜಿ ಸದಾಶಿವ ಸ್ವಾಮೀಜಿ ವರರುದ್ರಮುನಿ ಸ್ವಾಮೀಜಿ ಅಭಿವನ ಸಿದ್ದಲಿಂಗ ಸ್ವಾಮೀಜಿ ವೀರಭದ್ರ ಸ್ವಾಮೀಜಿ ಸೇರಿದಂತೆ ವಿವಿಧ ಮಠಾಧೀಶರು ಪಾಲ್ಗೊಳ್ಳಲಿದ್ದಾರೆ.

## ಅಸಂಘಟಿತ ಹಮಾಲಿ ಕಾರ್ಮಿಕರಿಗೆ ವಿಮೆ, ನಿವೃತ್ತಿ ವೇತನ ಸೇರಿದಂತೆ ಸಮಗ್ರ ಸೌಲಭ್ಯಗಳ ಒತ್ತಾಯ

ನೈಜ್ಯ ದೆಸೆ ನ್ಯೂಸ್

**ಮಾನ್ವಿ: ಪಟ್ಟಣದ ತಾಲೂಕು ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಯ ಆವರಣದಲ್ಲಿ ಕರ್ನಾಟಕ ರಾಜ್ಯ ಹಮಾಲರ ಮತ್ತು ಕೃಷಿ ಉತ್ಪನ್ನ ಮಾರುಕಟ್ಟೆಗಳ ಕಾರ್ಮಿಕರ ಒಕ್ಕೂಟ ಎ.ಐ.ಟಿ.ಯು.ಸಿ. ಸಂಯೋಜಿತ ವತಿಯಿಂದ ರಾಜ್ಯ ಸಣ್ಣ ನೀರಾವರಿ ಹಾಗೂ ವಿಜ್ಞಾನ ತಂತ್ರಜ್ಞಾನ ಸಚಿವ ಎನ್.ಎಸ್.ಬೋಸರಾಜು ರವರಿಗೆ ರಾಜ್ಯ ಪ್ರ.ಕಾರ್ಯದರ್ಶಿ ಕಾ. ಬಾಷುಮಿಯಾ ಮನವಿ ಸಲ್ಲಿಸಿ ಮಾತನಾಡಿ ಸರ್ಕಾರದ ವ್ಯಾಪ್ತಿಯ ವೇರ್ ಹೌಸ್ ಗೋದಾಮು,**



ಆಹಾರ ನಿಗಮ,ಗ್ರಾಮಾಂತರ ಪ್ರದೇಶದ ಸಹಕಾರ ಸಂಘಗಳ ಗೋದಾಮು, ನಗರ ಪ್ರದೇಶದಲ್ಲಿನ ಕೃಷಿ ಪರಿಕರಗಳ ಮಾರಾಟ ಅಂಗಡಿಗಳಲ್ಲಿ,ಅಕ್ಕಿ ಗಿರಣಿಗಳಲ್ಲಿ, ಅಗತ್ಯ ವಸ್ತುಗಳ ಸಾಗಣಿಕೆ ಕೆಲಸಗಳನ್ನು ನಿರ್ವಹಿಸುತ್ತಿರುವ ಎಲ್ಲಾ ಅಸಂಘಟಿತ ಕಾರ್ಮಿಕರನ್ನು ಅಂಬೇಡ್ಕರ ಸಹಾಯಹಸ್ತ ಯೋಜನೆಯಡಿಯಲ್ಲಿ ಕಾರ್ಮಿಕ ಇಲಾಖೆಯ ವ್ಯಾಪ್ತಿಗೆ ತಂದು ಇಲಾಖೆಯಿಂದ ನೊಂದಾಯಿಸಿ ಲೈಸನ್ಸ್ ನೀಡಿ ಗುರುತಿನ ಚೀಟಿ ನೀಡಿ ಅಗತ್ಯ ಎಲ್ಲಾ ಸೌಕರ್ಯಗಳನ್ನು ಕಲ್ಪಿಸಬೇಕು, ಹಮಾಲರನ್ನು ವಿಮಾಯೋಜನೆಗೆ ಒಳಪಡಿಸಿ ಸ್ವಾಭಾವಿಕ ಮರಣಕ್ಕೆ 5ಲಕ್ಷ , ಅಪಘಾತದಿಂದ ಸಂಬವಿಸಿದ ಮರಣಕ್ಕೆ 10ಲಕ್ಷ ಪರಿಹಾರ ವನ್ನು ಕುಟುಂಬದವರಿಗೆ ನೀಡಬೇಕು,ನಿವೇಶನ ಹಾಗೂ ವಸತಿ ಸೌಕರ್ಯ ಕಲ್ಪಿಸಬೇಕು. ಕಟ್ಟಡ ಕಾರ್ಮಿಕರ ಮಾದರಿಯಲ್ಲಿ ಹಮಾಲಿ ಕಾರ್ಮಿಕರ ಮಕ್ಕಳಿಗೆ ಶಿಷ್ಯವೇತನ, 50 ಸಾವಿರ ವಿವಾಹ ಸಹಾಯಧನ, ಹೆರಿಗೆ ಭತ್ಯ,ಉಚಿತ ಚಿಕಿತ್ಸ ಸೌಲಭ್ಯ, ಎ.ಪಿ.ಎಂ.ಸಿ.ಗಳಲ್ಲಿ ಕಸಗೂಡಿಸುವ ಮಹಿಳೆಯರಿಗೆ ಕನಿಷ್ಟ ವೇತನ ಜಾರಿ ಮಾಡಬೇಕು, 60 ವರ್ಷ ಮೀರಿದ ಹಮಾಲರಿಗೆ ನಿವೃತ್ತಿ ವೇತನ ಜಾರಿ ಮಾಡಬೇಕು, ಹಮಾಲರಿಗೆ ತೂಕದ ಮಿತಿಯನ್ನು ಗರಿಷ್ಠ 55 ಕೆಜಿ ನಿಗದಿ ಪಡಿಸಬೇಕು ಎಂದು ಒತ್ತಾಯಿಸಿದರು. ಶಾಸಕ ಹಂಪಯ್ಯನಾಯಕ ಇದ್ದರು. ಶ್ರೀ ಉದ್ಭವ ಆಂಜನೇಯ ಹಮಾಲರ ಸಂಘ ಎ.ಐ.ಟಿ.ಯು.ಸಿ, ಸಂಯೋಜಿತ ಮಾನ್ವಿ ಅಧ್ಯಕ್ಷರಾದ ಹನುಮಂತ,ಕಾರ್ಯದರ್ಶಿ ಸಿದ್ದರಾಮಯ್ಯಸ್ವಾಮಿ, ತಾ. ಅಂಗನವಾಡಿ ಕಾರ್ಯಕರ್ತೆಯರ ಸಂಘದ ತಾ.ಅಧ್ಯಕ್ಷೆ. ಚನ್ನಮ್ಮ, ಸೇರಿದಂತೆ ಹಮಾಲಿ ಕಾರ್ಮಿಕರು ಇದ್ದರು.

## ಬಳ್ಳಾರಿ ಹಿಂಸಾಚಾರದ ವರದಿಯನ್ನು ಡಿಸಿಎಂ ಡಿ.ಕೆ ಶಿವಕುಮಾರ ರವರಿಗೆ ತಲುಪಿಸಿದ :ನಿಯೋಗ



ನೈಜ್ಯ ದೆಸೆ ನ್ಯೂಸ್

**ಬೆಂಗಳೂರು: ಬಳ್ಳಾರಿ ಬ್ಯಾನರ್ ಘರ್ಷಣೆ ಮತ್ತು ಕಾಂಗ್ರೆಸ್ ಕಾರ್ಯಕರ್ತನ ಸಾವಿನ ಕುರಿತು ಮಾಜಿ ಸಚಿವ ಎಚ್.ಎಂ.ರೇವಣ್ಣ ನೇತೃತ್ವದ ಸತ್ಯಶೋಧನಾ ಸಮಿತಿಯು ಗುರುವಾರ ಬೆಂಗಳೂರಿನ ಖಾಸಗಿ ಹೋಟೆಲ್‌ನಲ್ಲಿ ಉಪಮುಖ್ಯಮಂತ್ರಿ ಮತ್ತು ಕರ್ನಾಟಕ ಪ್ರದೇಶ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಡಿ.ಕೆ. ಶಿವಕುಮಾರ್ ಅವರಿಗೆ ವರದಿ ಸಲ್ಲಿಸಿತು.**

ನಿಯೋಗದಲ್ಲಿ ರಾಯಚೂರು ಯಾದಗಿರಿ ಲೋಕಸಭಾ ಕ್ಷೇತ್ರದ ಸಂಸದ ಶ್ರೀ ಜಿ. ಕುಮಾರ ನಾಯಕ, ಚಳ್ಳಿಕೆರೆ ಶಾಸಕ ಶ್ರೀ ರಘುಮೂರ್ತಿ, ಮಾಜಿ ಸಂಸದ ಶ್ರೀ ಜಯಪ್ರಕಾಶ್ ಹೆಗ್ಡೆ ಮತ್ತು ವಿಧಾನ ಪರಿಷತ್ ಸದಸ್ಯರಾದ ಶ್ರೀ ಜಕ್ಕಪ್ಪನವರ್ ಮತ್ತು ಶ್ರೀ ಬಸವನಗೌಡ ಬಾದರ್ಲಿ ಸೇರಿದಂತೆ ನಿಯೋಗವು ಬಳ್ಳಾರಿಯ ಘರ್ಷಣೆಯ ಹಾಗೂ ಕಾಂಗ್ರೆಸ್ ಕಾರ್ಯಕರ್ತನ ಸಾವಿನ ಕುರಿತು ಸುದೀರ್ಘವಾದ ವರದಿಯನ್ನು ಎಚ್‌ಎಂ ರೇವಣ್ಣ ಮತ್ತು ಇತರ ಸಮಿತಿ ಸದಸ್ಯರು ಬಳ್ಳಾರಿಗೆ ತೆರಳಿ ಸ್ಥಳೀಯ ಮುಖಂಡರು ಮತ್ತು ಪಕ್ಷದ ಕಾರ್ಯಕರ್ತರನ್ನು ಭೇಟಿ ಮಾಡಿ, ಅಲ್ಲಿನ ನಿವಾಸಿಗಳೊಂದಿಗೆ ಸಂವಾದ ನಡೆಸಿ, ಘಟನೆಗಳ ಅನುಕ್ರಮ, ಆಡಳಿತಾತ್ಮಕ ಪ್ರತಿಕ್ರಿಯೆ ಮತ್ತು ಆರೋಪದ ಲೋಪಗಳಿಗೆ ಸಂಬಂಧಿಸಿದ ಮಾಹಿತಿಯನ್ನು ಸಂಗ್ರಹಿಸಿದರು. ಹಿಂಸಾಚಾರಕ್ಕೆ ಕಾರಣವಾದ ಸಂಗತಿಗಳು ಮತ್ತು ಕಾರ್ಯಕರ್ತನ ಸಾವಿಗೆ ಕಾರಣವಾದ ಸಂದರ್ಭಗಳನ್ನು ಖಚಿತಪಡಿಸಿಕೊಂಡು ಸತ್ಯಶೋಧನಾ ವರದಿಯನ್ನು ಇಂದು ಉಪಮುಖ್ಯಮಂತ್ರಿ ಹಾಗೂ ಕೆಪಿಸಿಸಿ ಅಧ್ಯಕ್ಷರಾದ ಶ್ರೀ ಡಿಕೆ ಶಿವಕುಮಾರ್ ಅವರಿಗೆ ವರದಿಯನ್ನು ಸಲ್ಲಿಸಿದರು, ವರದಿಯನ್ನು ಸ್ವೀಕರಿಸಿ ಸುದ್ದಿಗಾರರೊಂದಿಗೆ ಮಾತನಾಡಿದ ಉಪಮುಖ್ಯಮಂತ್ರಿಗಳು ವರದಿ ಈಗಾಗಲೇ ನನ್ನ ಕೈ ಸೇರಿದೆ ಅದನ್ನು ಪರಿಶೀಲಿಸಿದ ನಂತರವೇ ಮಾತನಾಡುತ್ತೇನೆ ಈಗ ಅದರ ಬಗ್ಗೆ ಚರ್ಚಿಸುವುದಿಲ್ಲ ಎಂದು ಹೇಳಿದರು.

# ಸಮಾಜ ಸೇವಕ ದ್ಯಾಪೂರ ಅವರಿಂದ ನೋಟ್ ಬುಕ್ ವಿತರಣೆ

ನೈಜ್ಯ ದೆಸೆ ನ್ಯೂಸ್



**ತಾಳಿಕೋಟಿ: ತಾಲೂಕಿನ ಕಲಕೇರಿ ಗ್ರಾಮದ ಸಮಾಜ ಸೇವಕ ದಾವಲಸಾಬ ದ್ಯಾಪೂರ ಇವರಿಂದ ಕಲಕೇರಿ ಕ್ಲಸ್ಟರ್ ಮಟ್ಟದ ವ್ಯಾಪ್ತಿಯ ಸರಕಾರಿ ಕನ್ನಡ ಹಾಗೂ ಉರ್ದು ಶಾಲೆಗಳ ಮಕ್ಕಳಿಗೆ ನೋಟ್ ಬುಕ್ ಹಾಗೂ ಕಂಪಾಸ್ ಬಾಕ್ಸ್ ಗಳನ್ನು ವಿತರಿಸಲಾಯಿತು.**

ತಾಲೂಕಿನ ಸರಕಾರಿ ಉರ್ದು ಶಾಲೆ ಕ್ಲಸ್ಟರ್ ವ್ಯಾಪ್ತಿಯ 14 ಶಾಲೆಗಳ 300 ವಿದ್ಯಾರ್ಥಿಗಳಿಗೆ ಹಾಗೂ ಕನ್ನಡ ಶಾಲೆಗಳ ಕ್ಲಸ್ಟರಿನ 580 ವಿದ್ಯಾರ್ಥಿಗಳಿಗೆ ಗುರುವಾರ ನೋಟ್ ಬುಕ್ ಮತ್ತು ಕಂಪಾಸ್ ಬಾಕ್ಸಗಳನ್ನು ವಿತರಿಸಲಾಯಿತು. ನಂತರ ಉರ್ದು ಶಾಲೆಯಲ್ಲಿ ಹಮ್ಮಿಕೊಂಡ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು ಸರ್ಕಾರಿ ಶಾಲೆಗಳಲ್ಲಿ ಓದುತ್ತಿರುವ ಮಕ್ಕಳಲ್ಲಿ ಹೆಚ್ಚಿನವರು ಬಡ ಕುಟುಂಬಗಳಿಂದ ಬಂದಂತವರಾಗಿರುವುದರಿಂದ ಆರ್ಥಿಕ ಸಮಸ್ಯೆಯಿಂದಾಗಿ ಅವರು ಶಿಕ್ಷಣವನ್ನು ನಿಲ್ಲಿಸಬಾರದು ಎಂಬ ಉದ್ದೇಶದಿಂದ ನಾನು ಈ ಕೆಲಸವನ್ನು ಮಾಡುತ್ತಿದ್ದೇನೆ ಮುಂದೆ ಇದರ ವ್ಯಾಪ್ತಿಯನ್ನು ಹೆಚ್ಚಿಸುವ ಗುರಿ ಇದೆ ಇದಕ್ಕೆ ನಿಮ್ಮೆಲ್ಲರ ಪ್ರೋತ್ಸಾಹ ಮತ್ತು ಸಹಕಾರ ನನಗೆ ಬೇಕು ಎಂದರು.

ಕ್ಲಸ್ಟರ್ ಸಿಆರ್ಪಿ ಎ.ಐ.ಮಣೂರ ಅವರು ಮಾತನಾಡಿ ಸಮಾಜ ಸೇವಕರಾದ ದಾವಲಸಾಬ ದ್ಯಾಪೂರ( ಕಲಕೇರಿ) ಅವರ ಈ ಕಾರ್ಯ ಅತ್ಯಂತ ಶ್ಲಾಘನೀಯವಾದದ್ದು. ಇದು ಅವರ ಸಾಮಾಜಿಕ ಬದ್ಧತೆ ಹಾಗೂ ಬಡವರ ಕುರಿತು ಅವರಿಗಿರುವ ಕಳಕಳಿಯನ್ನು ಎತ್ತಿ ತೋರಿಸುತ್ತದೆ ಎಂದರು. ಕಾರ್ಯಕ್ರಮದಲ್ಲಿ ಉರ್ದು ಶಾಲೆ ಮುಖ್ಯ ಗುರುಗಳಾದ ವಾಯ್. ಎಲ್. ಚೌಧರಿ, ಕನ್ನಡ ಪ್ರಾಥಮಿಕ ಶಾಲೆ ಮುಖ್ಯ ಶಿಕ್ಷಕ ಜಿ.ಬಿ.ಕುಲಕರ್ಣಿ, ಶಿಕ್ಷಕಿಂರಾದ ಎಸ್ಎಸ್ ದಫೇದಾರ,ಆರ್.ಐ. ರೀಸಾಲದಾರ,ಎಸ್.ಎಸ್. ಕಾಂಬಳೆ, ಸಿಬ್ಬಂದಿಗಳು ಹಾಗೂ ವಿದ್ಯಾರ್ಥಿಗಳು ಇದ್ದರು.

## ವಿಜಯ ಕರ್ನಾಟಕ ಪತ್ರಿಕೆ ಸಿಂಧನೂರಿನ ವರದಿಗಾರರು ಶ್ರೀ ಚಂದ್ರಶೇಖರ್ ಬೆನ್ನೂರು ಅವರು ರಾಜ್ಯ ಮಟ್ಟದ ಅಭಿಮನ್ಯು ದತ್ತಿ ಪ್ರಶಸ್ತಿಗೆ ಆಯ್ಕೆ .

ನೈಜ್ಯ ದೆಸೆ ನ್ಯೂಸ್

**ಸಿಂಧನೂರು: ಜ 9 ತಾಲೂಕು ಪತ್ರಿಕೋದ್ಯಮದ ಇತಿಹಾಸದಲ್ಲಿಯೇ ಕರ್ನಾಟಕ ರಾಜ್ಯ ಸರಕಾರದ ಮಾಧ್ಯಮ ಅಕಾಡೆಮಿಯಿಂದ ಅತ್ಯುತ್ತಮ ವರದಿಗೆ ನೀಡುವ ರಾಜ್ಯಮಟ್ಟದ ಅಭಿಮನ್ಯು ದತ್ತಿ ಪ್ರಶಸ್ತಿಗೆ ಆಯ್ಕೆಯಾಗಿರುವ ವಿಜಯ ಕರ್ನಾಟಕ ದಿನಪತ್ರಿಕೆಯ ವಸ್ತುನಿಷ್ಠ, ಜನಪರ ಕಾಳಜಿಯ ಬರಹಗಾರರು ಶ್ರೀ ಚಂದ್ರಶೇಖರ ಬೆನ್ನೂರು ಅವರಿಗೆ ಹೃತ್ಪೂರ್ವಕ ಅಭಿನಂದನೆಗಳು.**



ನಿಮ್ಮ ದಶಕದ ನೈಜ, ವಸ್ತುನಿಷ್ಠ ಬರಹಗಳಿಗೆ ಸ್ಪೂರ್ತಿ ಸಿಕ್ಕಿದ್ದು, ನಿಮ್ಮ ಸೇವೆ ನಿರಂತರವಾಗಿ ಸಾಗಲಿ. ಪತ್ರಿಕಾ ಕ್ಷೇತ್ರದಲ್ಲಿ ಸಿಂಧನೂರಿನ ಕೀರ್ತಿಯನ್ನು ರಾಜ್ಯಮಟ್ಟಕ್ಕೆ ತಲುಪುವಂತೆ ಮಾಡಿದ ನಿಮಗೆ ನಮ್ಮ ನೈಜ್ಯ ದೆಸೆ ದಿನ ಪತ್ರಿಕೆಯ ವತಿಯಿಂದ ಪ್ರಶಂಸೆ

## ದೇವರಾಜ ಅರಸು ದಾಖಲೆ ಮುರಿದ ಸಿದ್ದರಾಮಯ್ಯ ಅಭಿನಂದಿಸಿದ ತುರ್ವಿಹಾಳ ಕುರಿಗಾಯಿಗಳು



ನೈಜ್ಯ ದೆಸೆ ನ್ಯೂಸ್

**ಸಿಂಧನೂರು: ನಗರದ ಸರ್ಕ್ಯೂಟ್ ಹೌಸ್ ನಲ್ಲಿ ದೇವರಾಜ ಅರಸು ಅವರ ದಾಖಲೆ ಹಿಂದಿಕ್ಕಿ 2,7,99 ದಿನಗಳ ಸುದೀರ್ಘ ಸೇವೆಯಲ್ಲಿ ಮುಂದುವರೆಯುತ್ತಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ತುರ್ವಿಹಾಳ ಸಿದ್ದರಾಮಯ್ಯ ಅಭಿಮಾನಿ ಬಳಗ ಮತ್ತು ಕುರಿಗಾಯಿಗಳಿಂದ ಕೇಕ್ ಕತ್ತರಿಸುವ ಮೂಲಕ ಅಭಿನಂದಿಸಿದರು.**

ರಾಜ್ಯ ಮಹಿಳಾ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಡಾ.ನಾಗವೇಣಿ ಎಸ್.ಪಾಟೀಲ್ ಮಾತನಾಡಿ, ಹಿಂದುಳಿದ ವರ್ಗದ ನಾಯಕ ರಾಜ್ಯದ ಮುಖ್ಯಮಂತ್ರಿ ಸಿದ್ದರಾಮಯ್ಯನವರು ದಾಖಲೆ ಮುರಿದಿದ್ದಾರೆ. ಸೋಲಿಲ್ಲದ ಸರದಾರ ಹಳ್ಳಿಯಲ್ಲಿ ಹುಟ್ಟಿ ಬೆಳೆದು ದಿಲ್ಲಿಯವರೆಗೂ ಹೆಸರುವಾಸಿಯಾದ ಸಿದ್ದರಾಮಯ್ಯನವರು ಹಾಲುಮತ ಸಮಾಜಕ್ಕೆ ಅಪಾರ ಕೊಡುಗೆ ನೀಡಿದ್ದಾರೆ. ಕುರಿಗಾಯಿಗಳ ಮೇಲಾಗುವ ದೌರ್ಜನ್ಯ, ತಡೆ ಗಟ್ಟುವ ನಿಟ್ಟಿನಲ್ಲಿ ಗುಡ್ಡಗಾಡಿನಲ್ಲಿ ಕುರಿ ಕಾಯುವವರಿಗೆ ಬಂದೂಕಿನ ವ್ಯವಸ್ಥೆ ಮಾಡಿದ್ದಾರೆ.

ಮುಂದಿನ ದಿನಮಾನಗಳಲ್ಲಿ ಕುರುಬ ಸಮಾಜವನ್ನು ಎಸ್.ಟಿ.ಮೀಸಲಾತಿಗೆ ಹೋರಾಡಲು ಮನವಿ ಮಾಡಲಾಗುವುದು ಎಂದರು. ಈ ವೇಳೆ: ಶಿವರಾಯಪ್ಪ ಮೊದಲಗುಂದಿ, ಶರಣಪ್ಪ ಬೇರ್ಗಿ, ರಾಮಣ್ಣ ಕಾನಿಹಾಳ, ನಿಂಗಪ್ಪ ಚಂಚರ, ನಿರುಪಾದಿ ಕಾನಿಹಾಳ, ಅಂಬಣ್ಣ ಕುಂಟೋಜಿ, ಮುತ್ತು ನವಲಿ, ಯಮನೂರು ಐರಾಣಿ, ಹನುಮಂತ ಹಳ್ಳೂರು, ಗರ್ಜಪ್ಪ ಗುಡಿಸಲಿ, ಸೇರಿದಂತೆ ಹಲವಾರು ಜನರು ಕುರಿಗಾಯಿಗಳು ಹಾಗೂ ಸಿದ್ದರಾಮಯ್ಯ ಅವರ ಅಭಿಮಾನಿಗಳು ಉಪಸ್ಥಿತರಿದ್ದರು.

# 9 ರಿಂದ 14 ವರ್ಷದ ಹೆಣ್ಣುಮಕ್ಕಳಿಗೆ ಉಚಿತ ಹೆಚ್‌ಪಿವಿ ಲಸಿಕೆಗೆ ಜಾಗೃತಿ ನೀಡಿ: ಡಾ.ಸುರೇಂದ್ರ ಬಾಬು

ನೈಜ್ಯ ದೆಸೆ ನ್ಯೂಸ್

**ರಾಯಚೂರು: ಜನವರಿ 09 (ಕರ್ನಾಟಕ ವಾರ್ತೆ): ಹೆಣ್ಣು ಮಕ್ಕಳ ಜೀವನದಲ್ಲಿ ಗಂಭೀರತೆಯನ್ನು ಉಂಟು ಮಾಡುವ ಜೊತೆ ಜೊತೆಗೆ ಜೀವನಪೂರ್ತಿ ಕೊರಗುವಿಕೆಗೆ ಕಾರಣವಾಗುವ ಗರ್ಭಕಂಠದ ಕ್ಯಾನ್ಸರ್ ತಡೆಗೆ ರಾಜ್ಯ ಸರಕಾರವು ದಿಟ್ಟಹೆಜ್ಜೆ ಇಟ್ಟಿದ್ದು, 09 ರಿಂದ 14 ವರ್ಷದೊಳಗಿನ ಶಾಲಾ ಹೆಣ್ಣು ಮಕ್ಕಳಿಗೆ ಜಿಲ್ಲೆಯಲ್ಲಿ ಉಚಿತ ಹ್ಯೂಮನ್ ಪ್ಯಾಪಿಲೋಮ ವೈರಸ್ (ಹೆಚ್‌ಪಿವಿ) ಲಸಿಕೆಯನ್ನು ಹಾಕುವ ಕುರಿತು ಇಂದಿನಿಂದಲೇ ವ್ಯಾಪಕ ಮಾಹಿತಿಯನ್ನು ಶಾಲಾ ಮಟ್ಟದಲ್ಲಿ ನೀಡಬೇಕೆಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಸುರೇಂದ್ರ ಬಾಬು ಅವರು ಹೇಳಿದರು.**



ಜನವರಿ 09ರ ಶುಕ್ರವಾರ ದಂದು ನಗರದ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಕೃಷ್ಣ ಸಭಾಂಗಣದಲ್ಲಿ ಜರುಗಿದ ಹೆಚ್‌ಪಿವಿ ಲಸಿಕೆ ಕುರಿತು ತರಬೇತಿ ಕಾರ್ಯಾಗಾರಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು. ಸಾಮಾನ್ಯವಾಗಿ ವೈಯಕ್ತಿಕ ಶುಚಿತ್ವ, ಜನನಾಂಗಗಳಲ್ಲಿ ತೊಂದರೆ, ಹುಣ್ಣು ಹಾಗೂ ಲೈಂಗಿಕ ಸಂಪರ್ಕದಿಂದ ಹರಡುವ ಹ್ಯೂಮನ್ ಪ್ಯಾಪಿಲೋಮವೈರಸ್ (ಹೆಚ್‌ಪಿವಿ) ಸೋಂಕು ನಿರಂತರವಾಗಿ ಇದ್ದು, ಕ್ರಮೇಣ ಗರ್ಭಕಂಠದ ಜೀವಕೋಶಗಳಲ್ಲಿ ಬದಲಾವಣೆಗಳಾಗಿ ಕ್ಯಾನ್ಸರ್‌ರಾಗಿ ಬದಲಾಗುತ್ತದೆ ಎಂದರು.

ಈ ವೇಳೆ ಜಿಲ್ಲಾ ಆರ್‌ಸಿಹೆಚ್ ಅಧಿಕಾರಿ ಡಾ.ನಂದಿತಾ ಎಮ್.ಎನ್. ಅವರು ಮಾತನಾಡಿ, ಮುಖ್ಯವಾಗಿ ಧೂಮಪಾನ, ದುರ್ಬಲ ರೋಗ ನಿರೋಧಕ ಶಕ್ತಿ, ಜನನಾಂಗದ ಸೋಂಕು, ಬಹು ಲೈಂಗಿಕ ಪಾಲುದಾರಿಕೆಯು ಗರ್ಭಕಂಠದ ಕ್ಯಾನ್ಸರ್ ಕಾರಣವಾಗಬಹುದಾಗಿದ್ದು, ಈ ಹಿನ್ನಲೆಯಲ್ಲಿ ಆರೋಗ್ಯಕ್ಕೆ ಮಾರಕವಾಗುವುದನ್ನು ತಡೆಯಲು ಹೆಚ್‌ಪಿವಿ ಲಸಿಕೆ ಮಹತ್ವಪೂರ್ಣವಾಗಿದೆ.

ಮಾರ್ಗಸೂಚಿಯಡಿ 9 ರಿಂದ 14 ವರ್ಷದೊಳಗಿನ ಹೆಣ್ಣುಮಕ್ಕಳಿಗೆ ವಯಸ್ಸಿಗನುಗುಣವಾಗಿ ಉಚಿತವಾಗಿ ಚುಚ್ಚುಮದ್ದು ರೂಪದಲ್ಲಿ ನೀಡುವುದನ್ನು ವ್ಯಾಪಕವಾಗಿ ಶಾಲಾ ಮಟ್ಟದಲ್ಲಿ ಹಾಗೂ ಪಾಲಕರಿಗೂ ಮಾಹಿತಿ ಒದಗಿಸಲು ತಿಳಿಸಿದರು. ಇದೇ ಸಂದರ್ಭದಲ್ಲಿ ಜಿಲ್ಲಾ ಸರ್ವೇಕ್ಷಣಾಧಿಕಾರಿ ಡಾ.ಗಣೇಶ ಕೆ, ಜಿಲ್ಲಾ ಎನ್‌ಫೋರ್ಸ್‌ಮೆಂಟ್ ಅಧಿಕಾರಿ ಡಾ.ಶಿವಕುಮಾರ ನಾರಾ, ತಾಲೂಕಾ ಆರೋಗ್ಯ ಅಧಿಕಾರಿ ಡಾ.ಪ್ರಜ್ವಲ್ ಕುಮಾರ, ಮನೋವೈದ್ಯರು ಡಾ.ಮನೋಹರ್ ಪತ್ತಾರ, ಜಿಲ್ಲಾ ಆರೋಗ್ಯ ಶಿಕ್ಷಣಧಿಕಾರಿ ಈಶ್ವರ ಹೆಚ್. ದಾಸಪ್ಪವರ, ಉಪ ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಬಸಯ್ಯ, ಆಪ್ತ ಸಹಾಯಕರಾದ ಲೇಪಾಕ್ಷಯ್ಯ, ಐಎಫ್‌ವಿ ಕೊಪ್ರೇಶ್, ರಾಘವೇಂದ್ರ ಸೇರಿದಂತೆ ಜಿಲ್ಲೆಯ ಎಲ್ಲ ವೈದ್ಯಾಧಿಕಾರಿಗಳು, ತಾಲೂಕಾ ಮೇಲ್ವಿಚಾರಕರು, ಬಿಪಿಎಮ್, ಆಶಾ ಮೇಲ್ವಿಚಾರಕರು ಇದ್ದರು.

# ನೇಮಕಾತಿ ಪ್ರಕಟಣೆ

DHFWS ಉಡುಪಿ ನೇಮಕಾತಿ 2026–43 ನರ್ಸ್, ಮಲ್ಟಿ ರಿಹ್ಯಾಬಿಲಿಟೇಶನ್ ವರ್ಕರ್ ಹುದ್ದೆಗಳಿಗೆ ಆಫ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಿ DHFWS ಉಡುಪಿ ನೇಮಕಾತಿ 2026: 43 ನರ್ಸ್, ಮಲ್ಟಿ ರಿಹ್ಯಾಬಿಲಿಟೇಶನ್ ವರ್ಕರ್ ಹುದ್ದೆಗಳಿಗೆ ಅರ್ಜಿ ಸಲ್ಲಿಸಿ. ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಂಘ ಉಡುಪಿ ಜನವರಿ 2026 ರ DHFWS ಉಡುಪಿ ಅಧಿಕೃತ ಅಧಿಸೂಚನೆಯ ಮೂಲಕ ನರ್ಸ್, ಮಲ್ಟಿ ರಿಹ್ಯಾಬಿಲಿಟೇಶನ್ ವರ್ಕರ್ ಹುದ್ದೆಗಳನ್ನು ಭರ್ತಿ ಮಾಡಲು ಅರ್ಹ ಮತ್ತು ಆಸಕ್ತ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಿದೆ. ಉಡುಪಿ ಕರ್ನಾಟಕ ಸರ್ಕಾರದಲ್ಲಿ ವೃತ್ತಿಯನ್ನು ಹುಡುಕುತ್ತಿರುವ ಉದ್ಯೋಗಾಕಾಂಕ್ಷಿಗಳು ಈ ಅವಕಾಶವನ್ನು ಬಳಸಿಕೊಳ್ಳಬಹುದು. ಆಸಕ್ತ ಅಭ್ಯರ್ಥಿಗಳು ಜನವರಿ 16, 2026 ರಂದು ಅಥವಾ ಮೊದಲು ಆಫ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಬಹುದು. ಆಫ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಲು ಪ್ರಾರಂಭ ದಿನಾಂಕ: 31–12–2025 ಆಫ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ: 16–ಜನವರಿ–2026 ಅಧಿಕೃತ ವೆಬ್‌ಸೈಟ್: udupi.nic.in

## ರಾಯಚೂರು ಉತ್ಸವದಲ್ಲಿ ಎಲ್ಲರೂ ಭಾಗಿಯಾಗೋಣ: ಸಚಿವರಾದ ಎನ್ ಎಸ್ ಬೋಸರಾಜು ಮನವಿ

ನೈಜ್ಯ ದೆಸೆ ನ್ಯೂಸ್

**ರಾಯಚೂರು: ಜನವರಿ 09 (ಕರ್ನಾಟಕ ವಾರ್ತೆ): ಜನವರಿ 29, 30 ಹಾಗೂ 31ರಂದು ಆಯೋಜನೆ ಮಾಡಲಾದ ರಾಯಚೂರು ಜಿಲ್ಲಾ ಉತ್ಸವದಲ್ಲಿ ಎಲ್ಲರೂ ಭಾಗಿಯಾಗೋಣ ಎಂದು ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರಾದ ಎನ್ ಎಸ್ ಬೋಸರಾಜು ಅವರು ರಾಯಚೂರು ಜಿಲ್ಲೆಯ ಸಾರ್ವಜನಿಕರಲ್ಲಿ ಸಲಹೆ ಮಾಡಿದರು.**



ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಜನವರಿ 9ರಂದು ನಗರದ ವಿವಿಧ ಸಂಘ–ಸಂಸ್ಥೆಗಳ ಪ್ರಮುಖರು ಹಾಗೂ ವಿವಿಧ ಇಲಾಖೆಗಳ ಜಿಲ್ಲಾಮಟ್ಟದ ಅಧಿಕಾರಿಗಳೊಂದಿಗೆ ನಡೆದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ರಾಯಚೂರು ಜಿಲ್ಲೆಯಲ್ಲಿ ಬಹುವರ್ಷಗಳ ನಂತರ ಉತ್ಸವವು ನಿಗದಿಯಾಗಿದೆ. ಇದು ಸಾರ್ವಜನಿಕ ಉತ್ಸವ ಆಗಿರುವುದರಿಂದ ಸಂಘ–ಸಂಸ್ಥೆಗಳ ಪ್ರಮುಖರು ತನುಮನಧನದ ಮೂಲಕ ಉತ್ಸವದಲ್ಲಿ ಭಾಗಿಯಾಗಬೇಕು ಎಂದು ಸಚಿವರು ಮನವಿ ಮಾಡಿದರು. ಈ ವೇಳೆ ಚೆಂಬರ್ ಆಫ್ ಕಾಮರ್ಸನ ಎಸ್ ಕಮಲಕುಮಾರ ಅವರು ಮಾತನಾಡಿ, ಅತ್ಯಂತ ಪ್ರಶಸಾಂರ್ಹ ಕಾರ್ಯವನ್ನು ಜಿಲ್ಲಾಡಳಿತವು ಉತ್ಸವವನ್ನು ನಿಗದಿ ಮಾಡುವ ಮೂಲಕ ಮಾಡಿದೆ ಎಂದರು. ತಾವು ತನುಮನಧನದೊಂದಿಗೆ ಉತ್ಸವಕ್ಕೆ ಜೊತೆಯಾಗುವುದಾಗಿ ತಿಳಿಸಿದರು. ರಾಯಚೂರು ಉತ್ಸವ ಹಮ್ಮಿಕೊಂಡಿದಕ್ಕೆ ಖಾಸಗಿ ಶಿಕ್ಷಣ ಸಂಸ್ಥೆಗಳ ಒಕ್ಕೂಟದಿಂದ ಅಭಿನಂದಿಸುತ್ತೇವೆ. ಎಲ್ಲ ರೀತಿಯ ಸಹಕಾರ ಕೊಡುತ್ತೇವೆ ಎಂದು ಎಸ್.ಕೆ.ನಾಗಿರಡ್ಡಿ ತಿಳಿಸಿದರು. ರಾಯಚೂರು ಉತ್ಸವವು ಸಾಂಸ್ಕೃತಿಕ ಹಬ್ಬವಾಗಿದೆ. ಈ ಉತ್ಸವಕ್ಕೆ ಎಲ್ಲ ಖಾಸಗಿ ಶಿಕ್ಷಣ ಸಂಸ್ಥೆಗಳಿಂದ ಎಲ್ಲ ರೀತಿಯ ಸಹಕಾರ ನೀಡುತ್ತೇವೆ. ಖಾಸಗಿ ಶಾಲೆಗಳ ವಿದ್ಯಾರ್ಥಿಗಳನ್ನು ಕಾರ್ಯಕ್ರಮಕ್ಕೆ ಕರೆ ತರುತ್ತೇವೆ. ನಮ್ಮ ಶಾಲೆಗಳಲ್ಲಿನ ದೈಹಿಕ ಶಿಕ್ಷಣ, ಡ್ರಾಯಿಂಗ್ ಟೀಚರ್ ಸೇರಿದಂತೆ ಶಾಲೆಯ ಎನ್‌ಎಸ್‌ಎಸ್ ಮತ್ತು ಸ್ಕೌಟ್ಸ್ ಮತ್ತು ಗೈಡ್ಸ್ನ ತಂಡಗಳನ್ನು ಬೇರೆ ಬೇರೆ ಕಾರ್ಯಗಳಿಗೆ ನಿಯೋಜನೆ ಮಾಡಿ ಸಹಕಾರ ನೀಡುತ್ತೇವೆ ಎಂದು ರುಷ್ಮಾ ಶಿಕ್ಷಣ ಸಂಸ್ಥೆಯ ರಾಜಾ ಶ್ರೀನಿವಾಸ ತಿಳಿಸಿದರು. ಉತ್ಸವದಲ್ಲಿ ನಾವು ಸಂಪೂರ್ಣ ಭಾಗಿಯಾಗುತ್ತೇವೆ. ನಮಗು ಸಹ ಬೇರೆ ಬೇರೆ ಕಾರ್ಯಗಳಿಗೆ ಜವಾಬ್ದಾರಿ ವಹಿಸಿದರೆ ಜೊತೆಗಿದ್ದು ನಿರ್ವಹಿಸುತ್ತೇವೆ ಎಂದು ರೈಸ್ ಮಿಲ್ ಅಸೋಸಿಯೇಶನ್‌ದ ಎಸ್ ಪುರುಷೋತ್ತಮ ಹಾಗೂ ಅವರ ತಂಡದವರು ತಿಳಿಸಿದರು. ಉತ್ಸವದ ಮೆರವಣಿಗೆಯು ಐತಿಹಾಸಿಕ ಕರ್ನಾಟಕ ಸಂಘದಿಂದಲೇ ಆರಂಭವಾಗಬೇಕು. ಹಾಗಾದಲ್ಲಿ ನಗರದ ಎಲ್ಲ ಜನತೆಗೆ ಉತ್ಸವದಲ್ಲಿ ಭಾಗಿಯಾಗುವ ಕಲಾ ತಂಡಗಳ ರಸದೌತಣ ಸವಿಯಲು ಮತ್ತು ಉತ್ಸವದ ಬಗ್ಗೆ ಜನತೆಗೆ ತಿಳಿದು ಭಾಗಿಯಾಗಲು ಅನುಕೂಲವಾಗುತ್ತದೆ ಎಂದು ಕರ್ನಾಟಕ ಸಂಘದ ಅಧ್ಯಕ್ಷ ಕೆ.ಶಾಂತಪ್ಪ ಸಭೆಗೆ ಸಲಹೆ ಮಾಡಿದರು. ಸ್ಕೌಟ್ಸ್ ಮತ್ತು ಗೈಡ್ಸನ ಎನ್ ಶೇಖರ ಮಾತನಾಡಿ, ಉತ್ಸವದ ನಾನಾ ಕಾರ್ಯಗಳಿಗೆ ತಾವು ತಮ್ಮ ಸ್ಕೌಟ್ಸ್ ಮತ್ತು ಗೈಡ್ಸ್ ತಂಡದೊಂದಿಗೆ ಹಾಜರಾಗುವುದಾಗಿ ಹೇಳಿದರು. ಸಭೆಯಲ್ಲಿ ಮಹಾನಗರ ಪಾಲಿಕೆಯ ಆಯುಕ್ತರಾದ ಜುಬಿನ್ ಮೊಹಪಾತ್ರ, ಅಪರ ಜಿಲ್ಲಾಧಿಕಾರಿ ಶಿವಾನಂದ ಭಜಂತ್ರಿ, ರಾಯಚೂರು ಸಹಾಯಕ ಆಯುಕ್ತರಾದ ಡಾ.ಹಂಪಣ್ಣ ಸಜ್ಜನ್, ಪೊಲೀಸ್ ಇಲಾಖೆಯ ಡಿಎಸ್ಪಿ ಡಾ.ಶಾಂತವೀರ, ಮಹಾನಗರ ಪಾಲಿಕೆ ಜೋನಲ್ 1ರ ಸಹಾಯಕ ಆಯುಕ್ತರಾದ ಪುರುರಾಜ ಸೋಲಂಕಿ ಹಾಗೂ ಇನ್ನಿತರರು ಇದ್ದರು.

# ಸನ್ ರೈಸ್ ಕಾಲೇಜಿನಲ್ಲಿ "ವಿವೇಕ ಸಪ್ತಾಹ" ಅಂಗವಾಗಿ ವ್ಯಕ್ತಿತ್ವ ವಿಕಸನ ಉಪನ್ಯಾಸ

ನೈಜ್ಯ ದೆಸೆ ನ್ಯೂಸ್

**ಸಿಂಧನೂರು: ಜ 9 "ವಿವೇಕ ಸಪ್ತಾಹ" ಅಂಗವಾಗಿ ವಿದ್ಯಾರ್ಥಿಗಳಿಗೆ ವ್ಯಕ್ತಿತ್ವ ವಿಕಸನ ಕಾರ್ಯಕ್ರಮ ರಾಮಕೃಷ್ಣ ವಿವೇಕಾನಂದ ಆಶ್ರಮ, ಸಿಂಧನೂರು ವತಿಯಿಂದ ಸನ್ ರೈಸ್ ಡಿ ಫಾರ್ಮಸಿ, ನರ್ಸಿಂಗ್ ಹಾಗೂ ಪ್ಯಾರಾ ಮೆಡಿಕಲ್ ಕಾಲೇಜು, ಸಿಂಧನೂರು ಆವರಣದಲ್ಲಿ "ವಿವೇಕ ಸಪ್ತಾಹ"ದ ಅಂಗವಾಗಿ ಶಾಲಾ ಹಾಗೂ ಕಾಲೇಜು ವಿದ್ಯಾರ್ಥಿಗಳಿಗಾಗಿ ವ್ಯಕ್ತಿತ್ವ ವಿಕಸನ ಕಾರ್ಯಕ್ರಮವನ್ನು ಅರ್ಥಪೂರ್ಣವಾಗಿ ಹಮ್ಮಿಕೊಳ್ಳಲಾಯಿತು.**

ಕಾರ್ಯಕ್ರಮದಲ್ಲಿ ಯುವಾ ಬ್ರಿಗೇಡ್‌ನ ರಾಜ್ಯ ಪ್ರಕಲ್ಪ ಪ್ರಮುಖರಾದ ಖ್ಯಾತ ಉಪನ್ಯಾಸಕ ಶ್ರೀ ಕಿರಣ್ ರಾಮ್ ಅವರು ಮುಖ್ಯ ಅತಿಥಿಯಾಗಿ ಆಗಮಿಸಿ, "ಆಧ್ಯಾತ್ಮಿಕ ಭಾರತದ ನಿರ್ಮಾಣಕ್ಕೆ ಸ್ವಾಮಿ ವಿವೇಕಾನಂದರ ಸಂದೇಶ" ಎಂಬ ವಿಷಯದ ಕುರಿತು ವಿಶೇಷ ಹಾಗೂ ಪ್ರೇರಣಾದಾಯಕ ಉಪನ್ಯಾಸ ನೀಡಿದರು. ಉಪನ್ಯಾಸದಲ್ಲಿ ಶ್ರೀ ಕಿರಣ್ ರಾಮ್ ಅವರು ಸ್ವಾಮಿ ವಿವೇಕಾನಂದರ ಜೀವನ ಚರಿತ್ರೆ, ಅವರ ಆತ್ಮವಿಶ್ವಾಸ, ತ್ಯಾಗ, ಸೇವಾಭಾವ, ರಾಷ್ಟ್ರಭಕ್ತಿ ಮತ್ತು ಯುವಶಕ್ತಿಗೆ ನೀಡಿದ ಸಂದೇಶಗಳನ್ನು ಸವಿಸ್ತಾರವಾಗಿ ವಿವರಿಸಿದರು. "ಎದ್ದು ನಿಲ್ಲಿ, ಗುರಿ ತಲುಪುವವರೆಗೂ ನಿಲ್ಲಬೇಡಿ" ಎಂಬ ವಿವೇಕಾನಂದರ ಸಂದೇಶವು



ಇಂದಿನ ಯುವಜನತೆಗೆ ದಾರಿ ತೋರಿಸುವ ದೀಪವಾಗಿದೆ ಎಂದು ಅವರು ಹೇಳಿದರು. ಇಂದಿನ ಕಾಲಘಟ್ಟದಲ್ಲಿ ಶಿಕ್ಷಣವು ಕೇವಲ ಪದವಿ ಮತ್ತು ಉದ್ಯೋಗಕ್ಕೆ ಸೀಮಿತವಾಗದೆ, ಶ್ರೇಷ್ಠ ವ್ಯಕ್ತಿತ್ವ ನಿರ್ಮಾಣಕ್ಕೆ ಕಾರಣವಾಗಬೇಕು.

ಶಿಸ್ತು, ಆತ್ಮನಿಯಂತ್ರಣ, ಮೌಲ್ಯಾಧಾರಿತ ಜೀವನ ಹಾಗೂ ಸಮಾಜಸೇವೆಯ ಮನೋಭಾವ ಬೆಳೆಸಿದಾಗ ಮಾತ್ರ ಸ್ವಾಮಿ ವಿವೇಕಾನಂದರು ಕನಸುಗೊಂಡ ಆಧ್ಯಾತ್ಮಿಕ ಭಾರತವನ್ನು ನಿರ್ಮಿಸಲು ಸಾಧ್ಯ ಎಂದು ಅವರು ಅಭಿಪ್ರಾಯಪಟ್ಟರು. ಯುವಜನತೆ ನಕಾರಾತ್ಮಕ ಚಿಂತನೆಗಳಿಂದ ದೂರವಿದ್ದು, ತಮ್ಮೊಳಗಿನ ಶಕ್ತಿಯನ್ನು ಅರಿತು ರಾಷ್ಟ್ರ ನಿರ್ಮಾಣದ ಹೊಣೆಗಾರಿಕೆಯನ್ನು ಹೊತ್ತುಕೊಳ್ಳಬೇಕು. ವ್ಯಕ್ತಿತ್ವ ವಿಕಸನಕ್ಕೆ ಆತ್ಮವಿಶ್ವಾಸವೇ ಮೂಲಭೂತ ಶಕ್ತಿ ಎಂದು ಅವರು ವಿದ್ಯಾರ್ಥಿಗಳಿಗೆ ತಿಳಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಕಾಲೇಜಿನ ಆಡಳಿತ ಮಂಡಳಿ ವಹಿಸಿದ್ದು, ರಾಮಕೃಷ್ಣ ವಿವೇಕಾನಂದ ಆಶ್ರಮದ ಪದಾಧಿಕಾರಿಗಳು ಸ್ವಾಮಿ ವಿವೇಕಾನಂದರ ತತ್ವಚಿಂತನೆಗಳನ್ನು ಯುವಪೀಳಿಗೆಗೆ ತಲುಪಿಸುವ ಉದ್ದೇಶದಿಂದ "ವಿವೇಕ ಸಪ್ತಾಹ"ದಂತಹ ಕಾರ್ಯಕ್ರಮಗಳನ್ನು ನಿರಂತರವಾಗಿ ಹಮ್ಮಿಕೊಳ್ಳಲಾಗುತ್ತಿದೆ ಎಂದು ತಿಳಿಸಿದರು. ಕಾರ್ಯಕ್ರಮದಲ್ಲಿ ಸನ್ ರೈಸ್ ಕಾಲೇಜಿನ



ಕಾರ್ಯದರ್ಶಿ ಇರ್ಷಾದ್ ಕೆ , ಸನ್ ರೈಸ್ ಕಾಲೇಜಿನ ಪ್ರಾಂಶುಪಾಲರು ಚಕ್ರವರ್ತಿ ಡಿ , ಉಪನ್ಯಾಸಕರಾದ ವೀರೇಶ್, ಜ್ಞಾನೇಶ್ವರಿ, ವೀರೇಶ್ವರಿ, ಸಿಬ್ಬಂದಿ ವರ್ಗ ಹಾಗೂ ಹೆಚ್ಚಿನ ಸಂಖ್ಯೆಯಲ್ಲಿ ಶಾಲಾಕಾಲೇಜು ವಿದ್ಯಾರ್ಥಿಗಳು ಭಾಗವಹಿಸಿದ್ದರು. ಉಪನ್ಯಾಸದ ಬಳಿಕ ನಡೆದ ಪ್ರಶ್ನೋತ್ತರ ಕಾರ್ಯಕ್ರಮದಲ್ಲಿ ವಿದ್ಯಾರ್ಥಿಗಳು ಉತ್ಸಾಹದಿಂದ ಭಾಗವಹಿಸಿ, ತಮ್ಮ ಸಂಶಯಗಳಿಗೆ ಉತ್ತರಗಳನ್ನು ಪಡೆದುಕೊಂಡರು. ಕಾರ್ಯಕ್ರಮದ ಕೊನೆಯಲ್ಲಿ ಅತಿಥಿಗಳಿಗೆ ಸ್ಮರಣಿಕೆ ನೀಡುವ ಮೂಲಕ ಗೌರವಿಸಲಾಯಿತು. ಧನ್ಯವಾದಗಳೊಂದಿಗೆ ಕಾರ್ಯಕ್ರಮವನ್ನು ಶಿಸ್ತುಬದ್ಧವಾಗಿ ಮುಕ್ತಾಯಗೊಳಿಸಲಾಯಿತು. ಈ ಕಾರ್ಯಕ್ರಮವು ವಿದ್ಯಾರ್ಥಿಗಳ ಮನಸ್ಸಿನಲ್ಲಿ ಸ್ವಾಮಿ ವಿವೇಕಾನಂದರ ಆದರ್ಶಗಳನ್ನು ಆಳವಾಗಿ ಮೂಡಿಸುವಲ್ಲಿ ಯಶಸ್ವಿಯಾಯಿತು.

# ಸಿಂಧನೂರು: ಕನಕದಾಸ ಸರ್ಕಲ್‌ನಲ್ಲಿ ಅಗ್ನಿ ಅವಘಡ ವ್ಯಾಪಕ ಹಾನಿ



ನೈಜ್ಯ ದೆಸೆ ನ್ಯೂಸ್

**ಸಿಂಧನೂರಿನ ಕನಕದಾಸ್ ಸರ್ಕಲ್ ಬಳಿ ಇಂದು ರಾತ್ರಿ ಸುಮಾರು 1 ಗಂಟೆಯ ವೇಳೆಗೆ ಭಾರೀ ಅಗ್ನಿ ಅವಘಡ ಸಂಭವಿಸಿದೆ. ಈ ಪ್ರದೇಶದಲ್ಲಿದ್ದ ಸ್ಟೇಷನರಿ ಅಂಗಡಿ, ಬಟ್ಟೆ ಅಂಗಡಿ, ಹಗ್ಗದ ಅಂಗಡಿ ಹಾಗೂ ಚಿಕನ್ ಅಂಗಡಿಗಳಿಗೆ ಬೆಂಕಿ ತಗುಲಿ ಕೆಲವೇ ನಿಮಿಷಗಳಲ್ಲಿ ಬೆಂಕಿ ವ್ಯಾಪಕವಾಗಿ ಹರಡಿತು.**

ಅಗ್ನಿ ಅವಘಡದ ವೇಳೆ ಸ್ಥಳದಲ್ಲಿದ್ದ ಅಂಗಡಿಯವರು ಸಾಮಾನುಗಳನ್ನು ರಕ್ಷಿಸುವ ಸಲುವಾಗಿ ಅಂಗಡಿಗಳಿಂದ ಸಾಮಾನುಗಳನ್ನು ಹೊರಗೆ ತೆಗೆದು ಹಾಕಲು ಪ್ರಯತ್ನಿಸಿದರು.



ವಿಶೇಷವಾಗಿ ಚಿಕನ್ ಅಂಗಡಿಯಲ್ಲಿ ಇದ್ದ ಗ್ಯಾಸ್ ಸಿಲಿಂಡರ್‌ಗಳನ್ನು ತಕ್ಷಣವೇ ಆಫ್ ಮಾಡಿ ಸುರಕ್ಷಿತವಾಗಿ ಹೊರತೆಗೆದ ಪರಿಣಾಮ, ಹೆಚ್ಚಿನ ಅನಾಹುತ ಸಂಭವಿಸುವುದು ತಪ್ಪಿತು. ಈ ಅವಘಡದಲ್ಲಿ ಸ್ಟೇಷನರಿ ಸಾಮಗ್ರಿಗಳು, ಬಟ್ಟೆಗಳು, ಹಗ್ಗಗಳು ಸೇರಿದಂತೆ ದೊಡ್ಡ ಪ್ರಮಾಣದ ವಸ್ತುಗಳು ಸಂಪೂರ್ಣವಾಗಿ ಸುಟ್ಟು ಭಸ್ಮವಾಗಿದ್ದು, ಲಕ್ಷಾಂತರ ರೂಪಾಯಿ ನಷ್ಟವಾಗಿರುವ ಸಾಧ್ಯತೆ ಇದೆ.

ಘಟನೆಯ ಸಮಯದಲ್ಲಿ ಸ್ಥಳದಲ್ಲಿದ್ದವರು ಸುರಕ್ಷಿತವಾಗಿ ಹೊರಬಂದಿರುವುದರಿಂದ ಯಾವುದೇ ಪ್ರಾಣಹಾನಿ ಸಂಭವಿಸಿಲ್ಲ.

ಆದರೆ ಬೆಂಕಿಯ ತೀವ್ರತೆಯಿಂದ ಸುತ್ತಮುತ್ತಲಿನ ಪ್ರದೇಶದಲ್ಲಿ ದಟ್ಟ ಹೊಗೆ ಆವರಿಸಿಕೊಂಡು ಸಾರ್ವಜನಿಕರಲ್ಲಿ ಆತಂಕ ಮೂಡಿಸಿತು. ಅಗ್ನಿ ಅವಘಡಕ್ಕೆ ನಿಖರ ಕಾರಣ ಇನ್ನೂ ತಿಳಿದುಬಂದಿಲ್ಲ. ಶಾರ್ಟ್ ಸರ್ಕ್ಯೂಟ್ ಅಥವಾ ಅಜಾಗರೂಕತೆಯಿಂದ ಬೆಂಕಿ ಉಂಟಾಗಿರಬಹುದೆಂದು ಶಂಕಿಸಲಾಗಿದ್ದು, ಸಂಬಂಧಪಟ್ಟ ಅಧಿಕಾರಿಗಳು ಪರಿಶೀಲನೆ ನಡೆಸುತ್ತಿದ್ದಾರೆ. ಅಗ್ನಿಶಾಮಕ ದಳದ ಸಿಬ್ಬಂದಿಗೆ ಮಾಹಿತಿ ದೊರಕುತ್ತಿದ್ದಂತೆಯೇ ಅವರು ಸ್ಥಳಕ್ಕೆ ಧಾವಿಸಿ, ಹಲವು ಅಗ್ನಿಶಾಮಕ ವಾಹನಗಳ ಸಹಾಯದಿಂದ ನಿರಂತರ ಕಾರ್ಯಾಚರಣೆ ನಡೆಸಿ ಬೆಂಕಿಯನ್ನು ಸಂಪೂರ್ಣವಾಗಿ ನಿಯಂತ್ರಣಕ್ಕೆ ತಂದರು. ಸ್ಥಳೀಯ ಪೊಲೀಸರು ಹಾಗೂ ನಗರ ಪಾಲಿಕೆ ಸಿಬ್ಬಂದಿ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ.

# ರಾಜನಹಳ್ಳಿಯ ಶ್ರೀ ಮಹರ್ಷಿ ವಾಲ್ಮೀಕಿ ಜಾತ್ರಾ ಮಹೋತ್ಸವ ಪೂರ್ವಭಾವಿ ಸಭೆಯಲ್ಲಿ: ಸಂಸದ ಶ್ರೀ ಜಿ ಕುಮಾರ ನಾಯಕ ಭಾಗಿ

ನೈಜ್ಯ ದೆಸೆ ನ್ಯೂಸ್

**ದಾವಣಗೆರೆ ಜಿಲ್ಲೆಯ ಹರಿಹರ ತಾಲೂಕಿನ ರಾಜನಹಳ್ಳಿ ಗ್ರಾಮದ ವಾಲ್ಮೀಕಿ ಗುರುಪೀಠದಲ್ಲಿ ಫೆಬ್ರವರಿ 8 ಮತ್ತು 9 ರಂದು ಜರುಗುವ 8 ನೇ ವರ್ಷದ ಆದಿಕವಿ ಶ್ರೀ ಮಹರ್ಷಿ ವಾಲ್ಮೀಕಿ ಜಾತ್ರೆ ಅಂಗವಾಗಿ ಇಂದು ಶ್ರೀಮಠದ ಪೂರ್ವಭಾವಿ ಸಭೆಯಲ್ಲಿ ರಾಯಚೂರು ಯಾದಗಿರಿ ಲೋಕಸಭಾ ಕ್ಷೇತ್ರದ ಸಂಸದ ಶ್ರೀ ಜಿ ಕುಮಾರ ನಾಯಕರವರು.**

ಪಾಲ್ಗೊಂಡು ಜಾತ್ರಾ ಮಹೋತ್ಸವದ ಹಿನ್ನೆಲೆಯಲ್ಲಿ ಕಾರ್ಯಕ್ರಮದ ಆಯೋಜನೆ



ಹಾಗೂ ರೂಪರೇಷಗಳ ಅಗತ್ಯ ಸಲಹೆ ಸೂಚನೆಗಳನ್ನು ನೀಡಲಾಯಿತು, ಈ ವೇಳೆ ಶ್ರೀ ಮಠದ ಶ್ರೀಗಳು ಸಂಸದ ಜಿ ಕುಮಾರ ನಾಯಕರವರನ್ನು ಸನ್ಮಾನಿಸಿ ಆಶೀರ್ವದಿಸಿದರು. ಈ ಸಂದರ್ಭದಲ್ಲಿ ಶ್ರೀಮಠದ ಪರಮಪೂಜ್ಯ ಶ್ರೀ ವಾಲ್ಮೀಕಿ ಪ್ರಸನ್ನಾನಂದ ಸ್ವಾಮೀಜಿ, ವಾಲ್ಮೀಕಿ ನಿಗಮದ ಅಧ್ಯಕ್ಷರು ಹಾಗೂ ಶಾಸಕರಾದ ಶ್ರೀ ಬಸನಗೌಡ ದದ್ದಲ್ ರವರು, ಶಾಸಕರಾದ ಶ್ರೀ ರಘುಮೂರ್ತಿ ರವರು ಸೇರಿದಂತೆ ವಾಲ್ಮೀಕಿ ಸಮುದಾಯದ ಹಿರಿಯ ಮುಖಂಡರು ಹಾಗೂ ಭಕ್ತಾದಿಗಳು ಉಪಸ್ಥಿತರಿದ್ದರು.

# ಶಿಕ್ಷಕರ ಬೇಡಿಕೆಗಳ ಬಗ್ಗೆ ಸರ್ಕಾರ ಗಮನಹರಿಸಲಿ



ನೈಜ್ಯ ದೆಸೆ ನ್ಯೂಸ್

**ಕೊಪ್ಪಳ: ಪ್ರಾಥಮಿಕ ಶಾಲಾ ಶಿಕ್ಷಕರ ವಿವಿಧ ಬೇಡಿಕೆಗಳ ಬಗ್ಗೆ ಸರ್ಕಾರ ಗಮನ ಹರಿಸಬೇಕು ಎಂದು ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಜಿಲ್ಲಾಧ್ಯಕ್ಷ ಶರಣಬಸವನಗೌಡ ಪಾಟೀಲ ಸರ್ಕಾರವನ್ನು ಒತ್ತಾಯಿಸಿದರು.**

ಅಖಿಲ ಭಾರತ ಪ್ರಾಥಮಿಕ ಶಾಲಾ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘ ಹಾಗೂ ರಾಜ್ಯ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ನಿರ್ದೇಶನದ ಮೇರೆಗೆ ಕರ್ತವ್ಯ ನಿರ್ವಹಿಸುವ ಸ್ಥಳಗಳಲ್ಲಿ ಕಪ್ಪು ಬಟ್ಟೆ ಕಟ್ಟಿಕೊಂಡು ಕೆಲಸ ಮಾಡುವ ಅಂಗವಾಗಿ ಓದು ಕರ್ನಾಟಕ ತರಬೇತಿ ಪ್ರಾರಂಭದ ಪೂರ್ವದಲ್ಲಿ ಹಮ್ಮಿಕೊಂಡಿದ್ದ ಸಭೆ ಉದ್ದೇಶಿಸಿ ಮಾತನಾಡಿ 'ಪ್ರಾಥಮಿಕ ಶಾಲಾ ಶಿಕ್ಷಕರ ವೃಂದ ಮತ್ತು ನೇಮಕಾತಿ ನಿಯಮಗಳು ಪುರಾತನ ಕಾಲದಾಗಿದ್ದು ಕೂಡಲೇ ಅವುಗಳನ್ನು ಬದಲಾವಣೆ ಮಾಡುವ ಮೂಲಕ ಪ್ರಾಥಮಿಕ ಶಾಲಾ ಶಿಕ್ಷಕರಿಗೆ ಬಡ್ತಿ ನೀಡುವ ಕಾರ್ಯವಾಗಬೇಕು.

ಸೇವಾನಿರತ ಶಿಕ್ಷಕರಿಗೆ ಕಡ್ಡಾಯವಾಗಿ ಟಿ.ಇ.ಟಿ. ಉತ್ತೀರ್ಣವಾಗಬೇಕು ಎನ್ನುವ ನಿಯಮ ಕೈಬಿಡಬೇಕು' ಎಂದು ಆಗ್ರಹಿಸಿದರು. ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ನಿರ್ದೇಶಕರಾದ ಬೀರಪ್ಪ ಅಂಡಗಿ, ನಿರ್ದೇಶಕರಾದ ಬಸವರಾಜ ಜೀರ, ಶ್ರೀಪತಿ ಹಳ್ಳಿಕೇರಿ, ಪತ್ತಿನ ಸಹಕಾರ ಸಂಘದ ನಿರ್ದೇಶಕರಾದ ಪೂರ್ಣಿಮಾ ಪಟ್ಟಣಶೆಟ್ಟಿ, ನಾಗರಾಜ.ಎಚ್ ಸೇರಿದಂತೆ ಮುಂತಾದವರು ಹಾಜರಿದ್ದರು.

# ಅಸಂಘಟಿತ ಹಮಾಲಿ ಕಾರ್ಮಿಕರಿಗೆ ವಿಮೆ, ನಿವೃತ್ತಿ ವೇತನ ಸೇರಿದಂತೆ ಸಮಗ್ರ ಸೌಲಭ್ಯಗಳ ಒತ್ತಾಯ

ನೈಜ್ಯ ದೆಸೆ ನ್ಯೂಸ್

**ಮಾನ್ವಿ: ಪಟ್ಟಣದ ತಾಲೂಕು ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಯ ಆವರಣದಲ್ಲಿ ಕರ್ನಾಟಕ ರಾಜ್ಯ ಹಮಾಲರ ಮತ್ತು ಕೃಷಿ ಉತ್ಪನ್ನ ಮಾರುಕಟ್ಟೆಗಳ ಕಾರ್ಮಿಕರ ಒಕ್ಕೂಟ ಎ.ಐ.ಟಿ.ಯು.ಸಿ. ಸಂಯೋಜಿತ ವತಿಯಿಂದ ರಾಜ್ಯ ಸಣ್ಣ ನೀರಾವರಿ ಹಾಗೂ ವಿಜ್ಞಾನ ತಂತ್ರಜ್ಞಾನ ಸಚಿವ ಎನ್.ಎಸ್.ಬೋಸರಾಜು ರವರಿಗೆ ರಾಜ್ಯ ಪ್ರ.ಕಾರ್ಯದರ್ಶಿ ಕಾ. ಬಾಷುಮಿಯಾ ಮನವಿ ಸಲ್ಲಿಸಿ ಮಾತನಾಡಿ ಸರ್ಕಾರದ ವ್ಯಾಪ್ತಿಯ ವೇರ್ ಹೌಸ್ ಗೋದಾಮು, ಆಹಾರ ನಿಗಮ, ಗ್ರಾಮಾಂತರ ಪ್ರದೇಶದ ಸಹಕಾರ ಸಂಘಗಳ ಗೋದಾಮು,**

ನಗರ ಪ್ರದೇಶದಲ್ಲಿನ ಕೃಷಿ ಪರಿಕರಗಳ



ಮಾರಾಟ ಅಂಗಡಿಗಳಲ್ಲಿ,ಅಕ್ಕಿ ಗಿರಣಿಗಳಲ್ಲಿ, ಅಗತ್ಯ ವಸ್ತುಗಳ ಸಾಗಣಿಕೆ ಕೆಲಸಗಳನ್ನು ನಿರ್ವಹಿಸುತ್ತಿರುವ ಎಲ್ಲಾ ಅಸಂಘಟಿತ ಕಾರ್ಮಿಕರನ್ನು ಅಂಬೇಡ್ಕರ ಸಹಾಯಹಸ್ತ ಯೋಜನೆಯಡಿಯಲ್ಲಿ ಕಾರ್ಮಿಕ ಇಲಾಖೆಯ ವ್ಯಾಪ್ತಿಗೆ ತಂದು ಇಲಾಖೆಯಿಂದ ನೊಂದಾಯಿಸಿ ಲೈಸನ್ಸ್ ನೀಡಿ ಗುರುತಿನ ಚೀಟಿ ನೀಡಿ ಅಗತ್ಯ ಎಲ್ಲಾ ಸೌಕರ್ಯಗಳನ್ನು ಕಲ್ಪಿಸಬೇಕು, ಹಮಾಲರನ್ನು ವಿಮಾಯೋಜನೆಗೆ ಒಳಪಡಿಸಿ ಸ್ವಾಭಾವಿಕ ಮರಣಕ್ಕೆ 5ಲಕ್ಷ, ಅಪಘಾತದಿಂದ ಸಂಬವಿಸಿದ ಮರಣಕ್ಕೆ 10ಲಕ್ಷ ಪರಿಹಾರವನ್ನು ಕುಟುಂಬದವರಿಗೆ ನೀಡಬೇಕು,ನಿವೇಶನ ಹಾಗೂ ವಸತಿ ಸೌಕರ್ಯ ಕಲ್ಪಿಸಬೇಕು.

ಕಟ್ಟಡ ಕಾರ್ಮಿಕರ ಮಾದರಿಯಲ್ಲಿ ಹಮಾಲಿ ಕಾರ್ಮಿಕರ ಮಕ್ಕಳಿಗೆ ಶಿಷ್ಯವೇತನ, 50 ಸಾವಿರ ವಿವಾಹ ಸಹಾಯಧನ, ಹೆರಿಗೆ ಭತ್ಯ,ಉಚಿತ ಚಿಕಿತ್ಸ ಸೌಲಭ್ಯ, ಎ.ಪಿ.ಎಂ.ಸಿ.ಗಳಲ್ಲಿ ಕಸಗೂಡಿಸುವ ಮಹಿಳೆಯರಿಗೆ ಕನಿಷ್ಠ ವೇತನ ಜಾರಿ ಮಾಡಬೇಕು, 60 ವರ್ಷ ಮೀರಿದ ಹಮಾಲರಿಗೆ ನಿವೃತ್ತಿ ವೇತನ ಜಾರಿ ಮಾಡಬೇಕು, ಹಮಾಲರಿಗೆ ತೂಕದ ಮಿತಿಯನ್ನು ಗರಿಷ್ಠ 55 ಕೆಜಿ ನಿಗದಿ ಪಡಿಸಬೇಕು ಎಂದು ಒತ್ತಾಯಿಸಿದರು. ಶಾಸಕ ಹಂಪಯ್ಯನಾಯಕ ಇದ್ದರು. ಶ್ರೀ ಉದ್ಭವ ಆಂಜನೇಯ ಹಮಾಲರ ಸಂಘ ಎ.ಐ.ಟಿ.ಯು.ಸಿ, ಸಂಯೋಜಿತ ಮಾನ್ವಿ ಅಧ್ಯಕ್ಷರಾದ ಹನುಮಂತ,ಕಾರ್ಯದರ್ಶಿ ಸಿದ್ದರಾಮಯ್ಯಸ್ವಾಮಿ, ತಾ.ಅಂಗನವಾಡಿ ಕಾರ್ಯಕರ್ತೆಯರ ಸಂಘದ ತಾ.ಅಧ್ಯಕ್ಷೆ.ಚನ್ನಮ್ಮ, ಸೇರಿದಂತೆ ಹಮಾಲಿ ಕಾರ್ಮಿಕರು ಇದ್ದರು.

## ಶಿಕ್ಷಣ ಮಾರ್ಗದರ್ಶಿ ವಿಶೇಷ

### M Pharma ಫಾರ್ಮಾಸ್ಯುಟಿಕಲ್ ಅನಾಲಿಸಿಸ್

ಫಾರ್ಮಾಸ್ಯೂಟಿಕಲ್ ಅನಾಲಿಸಿಸ್ (Pharmaceutical Analysis) ವಿಷಯವು ಔಷಧೀಯ ಉತ್ಪನ್ನಗಳ ಗುಣಮಟ್ಟ, ಸುರಕ್ಷತೆ ಮತ್ತು ಪರಿಣಾಮಕಾರಿತ್ವವನ್ನು ಖಚಿತಪಡಿಸಲು ಬಳಸುವ ತತ್ವಗಳು ಮತ್ತು ತಂತ್ರಗಳ ಕುರಿತು ಆಳವಾದ ತಿಳುವಳಿಕೆಯನ್ನು ನೀಡುತ್ತದೆ. ಈ ಕೋರ್ಸ್‌ನಲ್ಲಿ ಕ್ರೋಮಾಟೋಗ್ರಫಿ, ಸ್ಪೆಕ್ಟ್ರೋಸ್ಕಪಿ ಮತ್ತು ಎಲೆಕ್ಟ್ರೋಕೆಮಿಕಲ್ ವಿಶ್ಲೇಷಣೆ ಸೇರಿದಂತೆ ವಿವಿಧ ವಿಶ್ಲೇಷಣಾತ್ಮಕ ವಿಧಾನಗಳನ್ನು ಒಳಗೊಂಡಿದ್ದು, ಔಷಧಗಳು ಮತ್ತು ಅವುಗಳ ಸಂಯೋಜನೆಗಳ ಗುಣಾತ್ಮಕ ಹಾಗೂ ಪ್ರಮಾಣಾತ್ಮಕ ಮೌಲ್ಯಮಾಪನಕ್ಕೆ ಅವು ಅತ್ಯಂತ ಅಗತ್ಯವಾಗಿವೆ. ವಿದ್ಯಾರ್ಥಿಗಳು ಕಚ್ಚಾ ವಸ್ತುಗಳ ಪರೀಕ್ಷೆಯಿಂದ ಹಿಡಿದು ಅಂತಿಮ ಉತ್ಪನ್ನಗಳ ಮೌಲ್ಯಮಾಪನದವರೆಗೆ, ಔಷಧ ಅಭಿವೃದ್ಧಿಯ ವಿವಿಧ ಹಂತಗಳಲ್ಲಿ ಈ ತಂತ್ರಗಳನ್ನು ಹೇಗೆ ಅನ್ವಯಿಸಬೇಕೆಂಬುದನ್ನು ಕಲಿಯುತ್ತಾರೆ. ಜೊತೆಗೆ, ನಿಯಂತ್ರಣಾತ್ಮಕ ಅಗತ್ಯಗಳು ಮತ್ತು ಗುಣಮಟ್ಟ ನಿಯಂತ್ರಣ ಮಾನದಂಡಗಳ ಕುರಿತು ತಿಳುವಳಿಕೆಯನ್ನು ಪಡೆಯುತ್ತಾರೆ. ಈ ಕೋರ್ಸ್ ವಿದ್ಯಾರ್ಥಿಗಳಿಗೆ ನಿಖರ ಮತ್ತು ಶುದ್ಧ ವಿಶ್ಲೇಷಣೆಗಳನ್ನು ನಡೆಸುವ ಅಗತ್ಯ ಕೌಶಲ್ಯಗಳನ್ನು ಒದಗಿಸಿ, ಔಷಧೀಯ ಉತ್ಪನ್ನಗಳು ಕೈಗಾರಿಕಾ ಹಾಗೂ ನಿಯಂತ್ರಣ ಸಂಸ್ಥೆಗಳ ಕಠಿಣ ಮಾನದಂಡಗಳನ್ನು ಪೂರೈಸುವಂತೆ ಮಾಡುತ್ತದೆ. (ಫಾರ್ಮಾಸ್ಯುಟಿಕಲ್ ಅನಾಲಿಸಿಸ್ (ಕ್ರೊಮ್ಯಾಟ ವಿಟಾಗ್ರಫಿ), (ಸ್ಪೆಕ್ಟ್ರೋಸ್ಕೋಪಿ) (ಮೆಥಡ್ ವ್ಯಾಲಿಡೇಶನ್), ಕೋರ್ಸ್ ವಿವರಣೆ ಮುಖ್ಯ ವಿಷಯಗಳು ಮಾದರಿ ಫಾರ್ಮಾಸ್ಯುಟಿಕಲ್ ವಿಶ್ಲೇಷಣಾ ತಂತ್ರಗಳು ಫಾರ್ಮಾಸ್ಯುಟಿ-ಕಲ್ ಗುಣಮಟ್ಟ ನಿಯಂತ್ರಣ ಮತ್ತು ಖಾತರಿ ಇನ್ಸ್ಟ್ರುಮೆಂಟಲ್ ಅನಾಲಿಸಿಸ್ ಔಷಧಿಗಳ ವಿಶ್ಲೇಷಣೆ ಅಶುದ್ಧತೆಗಳ ವಿಶ್ಲೇಷಣೆ ಮೆಥಡ್ ವ್ಯಾಲಿಡೇಶನ್ ಫಾರ್ಮಾಸ್ಯುಟಿಕಲ್ ಪ್ರೊಸೆಸ್ ಕೆಮಿಸ್ಟ್ರಿ ಫಾರ್ಮಾಕಾಲಜಿ ಮತ್ತು ಥೆರಪ್ಯೂಟಿಕ್ ಏಜೆಂಟ್ಸ್ (ಐಚ್ಛಿಕ) ಕೋರ್ಸ್ ಉದ್ದೇಶ : ಔಷಧಗಳು ಮತ್ತು ಫಾರ್ಮಾಸ್ಯುಟಿಕಲ್ಸ್‌ನ ಗುಣಾತ್ಮಕ ಮತ್ತು ಪರಿಮಾಣಾತ್ಮಕ ಮೌಲ್ಯಮಾಪನದಲ್ಲಿ ತರಬೇತಿ ನೀಡುವುದು. ಅರ್ಹತೆ (ಬಿ.ಫಾರ್ಮ್) ಪೂರ್ಣಗೊಳಿಸಿರಬೇಕು. ಅವಧಿ (Duration): 2 ವರ್ಷಗಳು

# ಗ್ಯಾರಂಟಿ ಯೋಜನೆಗಳಿಂದ ಬಡವರ ಜೀವನಮಟ್ಟ ಸುಧಾರಣೆ: ಸಚಿವ ಎನ್ ಎಸ್. ಬೋಸರಾಜು

❑ ನೈಜ್ಯ ದೆಸೆ ನ್ಯೂಸ್

**ಮಾನ್ವಿ: ಪಟ್ಟಣದ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಯ ಆವರಣದಲ್ಲಿ ತಾಲೂಕು ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ ಹಾಗೂ ಶ್ರೀ ಉದ್ಭವ ಆಂಜನೇಯ ಹಮಾಲರ ಸಂಘ ಎ.ಐ.ಟಿ.ಯು.ಸಿ, ಸಂಯೋಜಿತ ಮಾನ್ವಿ ಸಂಯುಕ್ತಾಶ್ರಯದಲ್ಲಿ ನಡೆದ ಎ.ಪಿ.ಎಂ.ಸಿ. ಹಮಾಲರಿಗೆ ನಿವೇಶನಗಳ ಹಕ್ಕು ಪತ್ರ ವಿತರಣೆ ಕಾರ್ಯಕ್ರಮದಲ್ಲಿ ತಾಲೂಕು ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ ಆವರಣದಲ್ಲಿ ಹಮಾಲಿ ಕಾರ್ಮಿಕರಿಗೆ ನಿವೇಶನಗಳ ಹಕ್ಕುಪತ್ರಗಳನ್ನು ವಿತರಿಸಿ ರಾಜ್ಯ ಸಣ್ಣ ನೀರಾವರಿ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರಾದ ಎನ್.ಎಸ್.ಬೋಸರಾಜು ಮಾತನಾಡಿ ತಾಲೂಕಿನ ತಾಲೂಕು ಕೃಷಿ ಉತ್ಪನ್ನ.**

ಮಾರುಕಟ್ಟೆ ಸಮಿತಿಯ ಆವರಣದಲ್ಲಿ ಹಮಾಲಿ ವೃತ್ತಿ ಮಾಡುತ್ತಿರುವ ನೂರಾರು ಹಮಾಲಿ ಕಾರ್ಮಿಕರಿಗೆ ತಮ್ಮದೆ ಒಂದು ಸೂರು ಇರಬೇಕು ಎನ್ನುವ ಉದ್ದೇಶದಿಂದ 2003 ರಲ್ಲಿ ನನ್ನ ಶಾಸಕತ್ವದ ಅವಧಿಯಲ್ಲಿ ಜಾನುವಾರು ಮಾರುಕಟ್ಟೆ ಹಾಗೂ ಗೋಧಮು,ಸೇರಿದಂತೆ ಹಮಾಲಿ ಕೂಲಿ ಕಾರ್ಮಿಕರಿಗಾಗಿ 10 ಎಕರೆ ಭೂಮಿಯನ್ನು ಖರೀದಿಸಿ 120 ನಿವೇಶನಗಳನ್ನು ರೂಪಿಸಲಾಗಿತ್ತು ನಂತರದಲ್ಲಿ ಬಂದ ಶಾಸಕರು ಹಮಾಲಿ ಕಾರ್ಮಿಕರಿಗೆ ನಿವೇಶನಗಳನ್ನು ಹಂಚಿಕೆ ಮಾಡದೆ ಇರುವುದರಿಂದ ಹಮಾಲಿ ಕಾರ್ಮಿಕರು ನಿವೇಶನ ವಂಚಿತರಾಗಬೇಕಾಯಿತು. ಈ ಕುರಿತು ಶ್ರೀ ಉದ್ಭವ ಆಂಜನೇಯ ಹಮಾಲರ ಸಂಘದ ಪ್ರತಿನಿಧಿಗಳು ನನ್ನ ಗಮನಕ್ಕೆ ತಂದ ನಂತರ ಕೃಷಿ ಉತ್ಪನ್ನ ಮಾರುಕಟ್ಟೆಯ ಉನ್ನತ ಅಧಿಕಾರಿಗಳಿಗೆ ಸೂಚನೆ ನೀಡಿ ಅರ್ಜಿ ಸಲ್ಲಿಸಿದ



ಅರ್ಹ 73 ಫಲಾನುಭವಿಗಳಿಗೆ ಇಂದು ಹಕ್ಕು ಪತ್ರಗಳನ್ನು ವಿತರಿಸಲಾಗುತ್ತಿದೆ ಪುರಸಭೆ ವತಿಯಿಂದ ವಿವಿಧ ಯೋಜನೆಯಡಿಯಲ್ಲಿ ಹಮಾಲರಿಗೆ ನಿವೇಶನಗಳಲ್ಲಿ ಮನೆಗಳನ್ನು ಕಟ್ಟಿಕೊಡಲಾಗುವುದು.

ಹಾಗೂ ಹಮಾಲರ ವಸತಿ ಪ್ರದೇಶದಲ್ಲಿ ರಸ್ತೆ,ನೀರು,ವಿದ್ಯುತ್, ಸೇರಿದಂತೆ ಅಗತ್ಯವಿರುವ ಎಲ್ಲಾ ನೂಲಸೌಲಭ್ಯಗಳನ್ನು ಕಲ್ಪಿಸಲಾಗುವುದು ಉಳಿದಿರುವ ನಿವೇಶನಗಳನ್ನು ಅರ್ಹ ಫಲಾನುಭಾವಿಗಳಿಗೆ ಹಂಚಿಕೆ ಮಾಡುವುದಕ್ಕೆ ತಾಲೂಕು ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ ಕಾರ್ಯದರ್ಶಿಗಳಿಗೆ ಸೂಚಿಸಲಾಗುವುದು. ರಾಜ್ಯದಲ್ಲಿ ಕಾಂಗ್ರೆಸ್ ನೇತೃತ್ವದಲ್ಲಿ ಬಡವರ ಕಲ್ಯಾಣಕ್ಕಾಗಿ ಅನೇಕ ಯೋಜನೆಗಳನ್ನು ಜಾರಿ ಮಾಡಲಾಗುತ್ತಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯನವರು ರಾಜ್ಯದ ಬಡವರ ಹಾಗೂ ಮಹಿಳೆಯರ ಸಬಲಿಕರಣಕ್ಕಾಗಿ ಜಾರಿಗೆ ತಂದ ಪಂಚಾಗ್ಯರಂತಿಗಳಿಂದ ಬಡಜನರ ಜೀವನ ಮಟ್ಟ ಸುಧರಿಸುತ್ತಿದೆ ಅನ್ನಭಾಗ್ಯ ಯೋಜನೆಯಡಿಯಲ್ಲಿ ನೀಡುತ್ತಿರುವ 10 ಕೇಜಿ ಅಕ್ಕಿಯಲ್ಲಿ ಪಡಿತರ ಕಾರ್ಡುದಾರರು 5ಕೇಜಿಯನ್ನು ಕಾಳಸಂತೆಯಲ್ಲಿ ಮಾರಾಟ ಮಾಡುತ್ತಿರುವುದು ಕಂಡು ಬಂದಿರುವುದರಿಂದ ಸರ್ಕಾರವು 10ಕೆಜಿ.ಅಕ್ಕಿಯಲ್ಲಿ 5ಕೇಜಿ ಅಕ್ಕಿಯನ್ನು ಕಡಿತಗೋಳಿಸಿ ಗೃಹಿಣಿಯರಿಗೆ ಅಗತ್ಯವಿರುವ ಎಣ್ಣೆ, ಉಪ್ಪು, ಸಕ್ಕರೆ,ಬೆಳೆ, ಸೇ-ರಿದಂತೆ 5ಖಾದ್ಯ ಪದಾರ್ಥಗಳನ್ನು ಒಳಗೊಂಡ ಇಂದಿರಾ ಕೀಟ್‌ಅನ್ನು ನೀಡುವ ಯೋಜನೆಯನ್ನು ಜಾರಿಗೆ ತರಲಾಗುತ್ತಿದೆ. ಗ್ಯಾರಂಟಿ ಯೋಜನೆಗಳಿಂದ ಮಕ್ಕಳು ಶಾಲೆಗೆ ಗೈರಾಗುವುದು ಕಡಿಮೆಯಾಗಿದ್ದು.

ಜೀವನ ಮಟ್ಟ ಸುಧರಾಣೆಯಾಗುತ್ತಿದೆ. ರಾಜ್ಯ ಸರ್ಕಾರದ ಯೋಜನೆಗಳು ರಾಜ್ಯದ ಎಲ್ಲಾ ಹಿಂದುಳಿದ ವರ್ಗದ ಜನರಿಗೆ ನೆರವಾಗುತ್ತಿವೆ ತಾಲೂಕಿನಲ್ಲಿ ಹೈವೆ ರಸ್ತೆಗಳ ಸುಧಾರಣೆ,ರೈಲು ಮಾರ್ಗಗಳಿಂದ ಹೆಚ್ಚಿನ ಅಭಿವೃದ್ದಿಯಾಗಲಿದೆ ಎಂದು ತಿಳಿಸಿದರು. ಶಾಸಕ ಹಂಪಯ್ಯನಾಯಕ ಮಾತನಾಡಿ ನಾನು ಎ.ಪಿ.ಎಂ.ಸಿ.ಅಧ್ಯರಾಗಿದ ಅವಧಿಯಲ್ಲಿ ಹಮಾಲಿ ಕಾರ್ಮಿಕರಿಗೆ ನಿವೇಶನಕ್ಕಾಗಿ ಜಂಇನು ಖರೀದಿಸಲಾಗಿತ್ತು .ಇಂದು ಹಕ್ಕು ಪತ್ರಗಳನ್ನು ವಿತರಿಸಲಾಗುತ್ತಿದೆ. ತಾಲೂಕಿನ ಅಭಿವೃದ್ದಿಗೆ ರಾಜ್ಯದ ಮುಖ್ಯಮಂತ್ರಿಗಳು ಸಾಕಷ್ಟು ಅನುದಾನ ನೀಡುತ್ತಿದಾರೆ ಎಂದು ತಿಳಿಸಿದರು. ಕಾರ್ಯಕ್ರಮದಲ್ಲಿ ಶ್ರೀ ಉದ್ಭವ ಆಂಜನೇಯ ಹಮಾಲರ ಸಂಘ ಎ.ಐ.ಟಿ.ಯು.ಸಿ, ಸಂಯೋಜೀತ ಮಾನ್ವಿ ವತಿಯಿಂದ ರಾಜ್ಯ ಸಚಿವರಾದ ಎನ್. ಎಸ್.ಬೋಸರಾಜು,ಶಾಸಕ ಹಂಪಯ್ಯನಾಯಕ, ತಾಲೂಕು ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಯ ಆಡಳಿತಾಧಿಕಾರಿ ರವಿಚಂದ್ರ, ಕಾರ್ಯದರ್ಶಿ ರಂಗನಾಥ ದೇಸಾಯಿ ಯವರನ್ನು ಸನ್ಮಾನಿಸಿ ಗೌರವಿಸಲಾಯಿತು.

ಕಾರ್ಯಕ್ರಮದಲ್ಲಿ ನಯೋಪ್ರ ಅಧ್ಯಕ್ಷರಾದ ಅಬ್ದುಲ್ ಗಫೂರಸಾಬ್, ರಾಜಾ ಸುಭಾಶ್ಚಂದ್ರನಾಯಕ, ಬಾಲಸ್ವಾಮಿಕೊಡ್ಲಿ, ಜಿಲ್ಲಾ ಹಿಂದುಳಿದ ಅಯೋಗದ ಅಧ್ಯಕ್ಷರಾದ ಕೆ.ಶಾಂತಪ್ಪ, ಗ್ಯಾರಂಟಿ ಸಮಿತಿಯ ತಾ.ಅಧ್ಯಕ್ಷರಾದ ಬಿ.ಕೆ. ಅಮರೇಶಪ್ಪ, ಮುಖಂಡರಾದ ಶರಣಪ್ಪ ಕೆ.ಗುಡದಿನ್ನಿ,. ಕೆ.ಬಸವಂತಪ್ಪ, ಮಾಜಿ ಎ.ಪಿ.ಎಂ.ಸಿ ಸದಸ್ಯರಾದ ಶಿವರಾಜ ನಾಯಕ,ಸುಬ್ಬರೆಡ್ಡಿ, ಎ.ಐ.ಟಿ.ಯು.ಸಿ ರಾಜ್ಯ ಕಾರ್ಯದರ್ಶಿ ಬಾಷುಮಿಯಾ,-ಅಂಗನವಾಡಿ ಕಾರ್ಯಕರ್ತೆಯರ ಸಂಘದ ತಾ.ಅಧ್ಯಕ್ಷೆ.ಚನ್ನಮ್ಮ, ಶ್ರೀ ಉದ್ಭವ ಆಂಜನೇಯ ಹಮಾಲರ ಸಂಘ ಎ.ಐ.ಟಿ.ಯು.ಸಿ, ಸಂಯೋಜಿತ ಮಾನ್ವಿ ಅಧ್ಯಕ್ಷರಾದ ಹನುಮಂತ,ಕಾರ್ಯದರ್ಶಿ ಸಿದ್ದರಾಮಯ್ಯಸ್ವಾಮಿ ಸೇರಿದಂತೆ ಹಮಾಲಿ ಕಾರ್ಮಿಕರ ಕುಟುಂಬಗಳು ಭಾಗವಹಿಸಿದವು.

# ಕೃಷಿ ವಿಶ್ವವಿದ್ಯಲಯದಲ್ಲಿ ಸಹಕಾರ ಕುರಿತು ವಿಶೇಷ ಉಪನ್ಯಾಸ

❑ ನೈಜ್ಯ ದೆಸೆ ನ್ಯೂಸ್

**ರಾಯಚೂರು: ಜ. 9: ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳ, ರಾಯಚೂರು ಜಿಲ್ಲಾ ಸಹಕಾರ ಒಕ್ಕೂಟ ಹಾಗೂ ರಾಯಚೂರು ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯ ಇವುಗಳ ಸಂಯುಕ್ತ ಆಶ್ರಯದಲ್ಲಿ "ಕೃಷಿ ವಿಶ್ವವಿದ್ಯಾಲಯದ ಬಿ.ಎಸ್.ಸಿ. ಅಗ್ರಿ ವಿದ್ಯಾರ್ಥಿಗಳಿಗೆ 'ಸಹಕಾರ' ಕುರಿತು ರಾಯಚೂರು ಜಿಲ್ಲಾ ಸಹಕಾರ ಒಕ್ಕೂಟದ ಮುಖ್ಯಕಾರ್ಯನಿರ್ವಹಣಾಧಿಕಾರಿ ಗಾಯತ್ರಿ ವೈ.**



ಇವರು ವಿದ್ಯಾರ್ಥಿಗಳಿಗೆ ಸಹಕಾರದ ಇತಿಹಾಸ, ಸಹಕಾರ ಸಂಘಗಳ ಉಗಮ, ನಡೆದುಬಂದ ದಾರಿ ಮುಂತಾದ ವಿಷಯಗಳ ಕುರಿತು ವಿಶೇಷ ಉಪನ್ಯಾಸದಲ್ಲಿ ತಿಳಿಸಿದರು. ಮುಂದುವರೆದು ಮಾತನಾಡಿ ಮಹಾಮಂಡಳದ ನಿರ್ದೇಶನದಂತೆ ಜಿಲ್ಲಾ ಸಹಕಾರ ಒಕ್ಕೂಟದ ಮೂಲಕ ಜರುಗುವ ಸದಸ್ಯ ಶಿಕ್ಷಣ ತರಬೇತಿ, ಸಹಕಾರ ಸಪ್ತಾಹ, ಪ್ರಬಂಧ ಹಾಗೂ ಚರ್ಚಾ ಸ್ಪರ್ಧೆ ಮುಂತಾದ ಕಾರ್ಯಚಟುವಟಿಕೆಗಳ ಬಗ್ಗೆ ಮಾಹಿತಿ ನೀಡಿದರು.. ರಾಯಚೂರು ಜಿಲ್ಲಾ ಸಹಕಾರ ಒಕ್ಕೂಟದ ಜಿಲ್ಲಾ ಸಹಕಾರ ಶಿಕ್ಷಕರದ ಮಂಜುಳಾ ಮಾತನಾಡಿ ಸಹಕಾರ ಸಂಘಗಳ ರಚನೆ, ಉದ್ಧೇಶ, ಸಂಘಗಳ ಕಾರ್ಯ ಚಟುವಟಿಕೆಗಳ ಒಕ್ಕೂಟದಿಂದ ಜರುಗುವ ಕ್ಲಸ್ಟರ್ ತರಗತಿಗಳ ಕುರಿತು ಮಾಹಿತಿ ನೀಡಿದರು. ಕಾಲೇಜ್ ಉಪನ್ಯಾಸಕರಾದ ಡಾ|| ಸತೀಶ ಸರ್ವರನ್ನು ಸ್ವಾಗತಿಸಿದರು. ಇದೇ ಸಂದರ್ಭದಲ್ಲಿ ಉಪನ್ಯಾಸಕರಾದ ವಿಜಯ ವಾಲಿ ಉಪಸ್ಥಿತರಿದ್ದರು. ತರಬೇತಿಯಲ್ಲಿ ಕೃಷಿ ವಿಶ್ವವಿದ್ಯಾಲಯದ ಬಿ.ಎಸ್.ಸಿ. ಅಗ್ರಿ ವಿದ್ಯಾರ್ಥಿಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ತರಬೇತಿಯ ಬಗ್ಗೆ ಮೆಚ್ಚುಗೆ ವ್ಯಕ್ತಪಡಿಸಿದರು. "

## ಕರ್ನಾಟಕ ಸರ್ಕಾರದ ಬೃಹತ್ , ಮಧ್ಯಮ ಕೈಗಾರಿಕೆ,ಮೂಲ ಸೌಲಭ್ಯ ಅಭಿವೃದ್ಧಿ ಹಾಗೂ ವಿಜಯಪುರ ಜಿಲ್ಲಾ ಉಸ್ತುವಾರಿ ಸಚಿವರಾದ ಎಂ ಬಿ ಪಾಟೀಲರವರಿಗೆ ಸನ್ಮಾನ

❑ ನೈಜ್ಯ ದೆಸೆ ನ್ಯೂಸ್

**ತಾಳಿಕೋಟಿ: ತಾಲೂಕಿನ ಚಬನೂರ ಗ್ರಾಮದಲ್ಲಿ ನಡೆಯಲಿರುವ ಸಿದ್ಧಿ ಪುರುಷ ಶ್ರೀರಾಮಲಿಂಗೇಶ್ವರ ನೂತನ ಮಠ ಹಾಗೂ ಸಭಾಭವನ ಉದ್ಘಾಟನಾ ಸಮಾರಂಭದ ನಿಮಿತ್ಯ ಫೆಬ್ರವರಿ 3 ರಂದು ನಡೆಯಲಿರುವ ರೈತೋತ್ಸವ ಕಾರ್ಯಕ್ರಮಕ್ಕೆ ಆಗಮಿಸಲಿರುವ ಕರ್ನಾಟಕ ಸರ್ಕಾರದ ಬೃಹತ್, ಮಧ್ಯಮ ಕೈಗಾರಿಕೆ,**



ಮೂಲ ಸೌಲಭ್ಯ ಅಭಿವೃದ್ಧಿ ಹಾಗೂ ವಿಜಯಪುರ ಜಿಲ್ಲಾ ಉಸ್ತುವಾರಿ ಸಚಿವ ಎಂಬಿ ಪಾಟೀಲ-ರಿಗೆ ಕೊಡೆಕಲ್ ಶ್ರೀಗಳ ನೇತೃತ್ವದ ಮಠಾಧೀಶರ ನಿಯೋಗವು ಬುಧವಾರ ಸನ್ಮಾನಿಸಿ ಆಶೀರ್ವಾದ ನೀಡಿತು. ನೇತ್ರ ತಜ್ಞ ಡಾ.ಪ್ರಭುಗೌಡ ಲಿಂಗದಳ್ಳಿ ಮತ್ತಿತರರು ಇದ್ದರು.

# ಹಿರಿಯ ಮುಖ್ಯ ಗುರುಮಾತೆ ಆಲೂರಗೆ ಸನ್ಮಾನ



❑ ನೈಜ್ಯ ದೆಸೆ ನ್ಯೂಸ್

**ತಾಳಿಕೋಟಿ: ತಾಲೂಕಿನ ಶಿವಪೂರ ಗ್ರಾಮದ ಸರ್ಕಾರಿ ಮಾದರಿ ಪ್ರಾಥಮಿಕ ಶಾಲೆಗೆ ಹಿರಿಯ ಮುಖ್ಯಗುರು ಮಾತೆಯಾಗಿ ನೇಮಕಗೊಂಡಿರುವ ಆರ್ ಬಿ ಆಲೂರ ಇವರಿಗೆ ದಲಿತ ಸಂಘಟನೆಗಳ ಮುಖಂಡರು ಶುಕ್ರವಾರ ಸನ್ಮಾನಿಸಿ ಗೌರವಿಸಿದರು.**

ಈ ಸಂದರ್ಭದಲ್ಲಿ ಗಡಿನಾಡು ಜೈ ಭೀಮ ವೇದಿಕೆ ರಾಜ್ಯ ಉಪಾಧ್ಯಕ್ಷ ಅಶೋಕ ಚಲವಾದಿ ಅವರು ಮಾತನಾಡಿ ತಾಳಿಕೋಟಿ ಎಂ ಪಿ ಎಸ್ ನಲ್ಲಿ ಮುಖ್ಯ ಗುರುಮಾತೆಯಾಗಿ ಕ್ರಿಯಾಶೀಲತೆಯೊಂದಿಗೆ ಸೇವೆಯನ್ನು ಸಲ್ಲಿಸಿ ಇಲಾಖೆಗೆ ಒಳ್ಳೆಯ ಹೆಸರನ್ನು ತಂದುಕೊಟ್ಟ ಅನುಭವಿ ಶಿಕ್ಷಕಿ ಸಹೋದರಿ ಆಲೂರ ಅವರು ಈ ಶಾಲೆಗೆ ವರ್ಗಾವಣೆಗೊಂಡು ಬಂದಿರುವುದು ಸಂತಸದ ವಿಷಯ ಅವರ ಸೇವಾ ಅವಧಿಯಲ್ಲಿ ಈ ಶಾಲೆ ಇನ್ನೂ ಹೆಚ್ಚಿನ ಪ್ರಗತಿಯನ್ನು ಸಾಧಿಸಲಿ ಎಂದರು. ಸನ್ಮಾನ ಸ್ವೀಕರಿಸಿ ಮಾತನಾಡಿದ ಮುಖ್ಯಗುರುಮಾತೆ ಆಲೂರ ಅವರು ಈ ನಿಮ್ಮ ಸನ್ಮಾನ ನನ್ನ ಜವಾಬ್ದಾರಿಯನ್ನು ಹೆಚ್ಚಿಸಿದೆ.

ನಾನು ಇಲ್ಲಿ ಸೇವೆಯಲ್ಲಿ ಇರುವವರೆಗೂ ಮಕ್ಕಳಿಗೆ ಗುಣಮಟ್ಟದ ಶಿಕ್ಷಣ ಸಿಗುವಂತಾಗಲು ಶಕ್ತಿ ಮೀರಿ ಪ್ರಯತ್ನಿಸುತ್ತೇನೆ ಇದಕ್ಕೆ ನನ್ನ ಸಹೋದ್ಯೋಗಿಗಳೊಂದಿಗೆ ನಿಮ್ಮ ಹಾಗೂ ಗ್ರಾಮದ ಎಲ್ಲ ಜನರ ಸಹಕಾರ ನನಗೆ ಬೇಕು ಎಂದರು. ಈ ಸಮಯದಲ್ಲಿ ಶಿಕ್ಷಕರ ಪತ್ತಿನ ಸಹಕಾರಿ ಸಂಘದ ಅಧ್ಯಕ್ಷ ಸುರೇಶ ವಾಲಿಕಾರ, ದಲಿತ ಮುಖಂಡರಾದ ಜುಮ್ಮಪ್ಪ ಗುಂಡುಕನಾಳ, ಹುಸೇನಪ್ಪ ಮೂಕಿಹಾಳ, ರಾಜು ಅಲ್ಲಪೂರ, ಮಂಜುನಾಥ ಪೂಜಾರಿ, ಡೂಗಪ್ಪ ಚಲವಾದಿ, ರವಿರಾಜ ಬಾಗೇವಾಡಿ,ಅಪ್ಪು ತಳವಾರ,

# ಸರ್ವೋದಯ ಕಾಲೇಜ ಮಾನವಿಯಲ್ಲಿ ಪ್ರಥಮ ವರ್ಷದ ವಿದ್ಯಾರ್ಥಿಗಳ ಸ್ವಾಗತ ಸಮಾರಂಭವನ್ನು ಸಚಿವ ಎನ್ ಎಸ್ ಬೋಸರಾಜು ಅವರಿಂದ ಉದ್ಘಾಟನೆ

❑ ನೈಜ್ಯ ದೆಸೆ ನ್ಯೂಸ್

**ಮಾನವಿ: ಪಟ್ಟಣದ ಸರ್ವೋದಯ ಡಿ.ಫಾರ್ಮಸಿ, ನರ್ಸಿಂಗ್, ಪ್ಯಾರಾ ಮೆಡಿಕಲ್ ಹಾಗೂ ಪಿಯುಸಿ ಕಾಲೇಜಿನಲ್ಲಿ ಪ್ರಥಮ ವರ್ಷದ ವಿದ್ಯಾರ್ಥಿಗಳ ಸ್ವಾಗತ ಸಮಾರಂಭ ಹಾಗೂ ನರ್ಸಿಂಗ್ ವಿದ್ಯಾರ್ಥಿಗಳ ದೀಪ ಬೆಳಗಿಸುವ ಮತ್ತು ಪ್ರತಿಜ್ಞಾ ವಿಧಿ ಬೋಧನೆ ಕಾರ್ಯಕ್ರಮ ಭಾನುವಾರ ವಿಜೃಂಭಣೆಯಿಂದ ನಡೆಯಿತು. ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಕರ್ನಾಟಕ ಸರ್ಕಾರದ ಸಚಿವರಾದ ಎನ್.ಎಸ್. ಬೋಸರಾಜ್ ಅವರು ದೀಪ ಬೆಳಗಿಸುವ ಮೂಲಕ ಸಮಾರಂಭಕ್ಕೆ ಚಾಲನೆ ನೀಡಿದರು. ಈ ಸಂದರ್ಭದಲ್ಲಿ ಅವರು ಮಾತನಾಡಿ, ಮಾ ಫ್ರೆಂಡ್ಸ್ ಮನವಿಯ ಮಕ್ಕಳು , ಸರ್ವೋದಯ ಶಿಕ್ಷಣ ಸಂಸ್ಥೆ ಮಾನವಿ ತಾಲೂಕಿನ ಶೈಕ್ಷಣಿಕ ಕ್ಷೇತ್ರಕ್ಕೆ ಮಹತ್ವದ ಕೊಡುಗೆ ನೀಡುತ್ತಿದೆ.**

ಮನೋಜ್ ಕುಮಾರ್, ಅನಿಲ್ ಕುಮಾರ್ ಹಾಗೂ ಆಂಜನೇಯ ಅವರು ಮೂರು ಗೆಳೆಯರು ಸೇರಿ ಇಂತಹ ದೊಡ್ಡ ಶಿಕ್ಷಣ ಸಂಸ್ಥೆಯನ್ನು ಸ್ಥಾಪಿಸಿ ತಾಲೂಕಿನ ಕೀರ್ತಿಯನ್ನು ಹೆಚ್ಚಿಸಿದ್ದಾರೆ ಎಂದು ಶ್ಲಾಘಿಸಿದರು. ನಂತರ ಶಾಸಕ ಹಂಪಯ್ಯ ನಾಯಕ ಅವರು ಮುಖ್ಯ ಅತಿಥಿಯಾಗಿ ಭಾಗವಹಿಸಿ ವಿದ್ಯಾರ್ಥಿಗಳಿಗೆ ಮಾರ್ಗದರ್ಶನ ನೀಡಿದರು. ಈ ಸಂದರ್ಭದಲ್ಲಿ ಮಾತನಾಡಿದ ಅವರು, ವಿದ್ಯಾರ್ಥಿ ಜೀವನವೇ ಭವಿಷ್ಯದ ಬದುಕಿನ ಅಡಿಪಾಯ. ಶಿಸ್ತು, ಪರಿಶ್ರಮ ಹಾಗೂ ಮೌಲ್ಯಾಧಾರಿತ ಶಿಕ್ಷಣವನ್ನು ಅಳವಡಿಸಿಕೊಂಡರೆ ಯಶಸ್ಸು ನಿಮ್ಮದಾಗುತ್ತದೆ. ಗ್ರಾಮೀಣ ಪ್ರದೇಶದ ವಿದ್ಯಾರ್ಥಿಗಳಿಗೆ ಗುಣಮಟ್ಟದ ಶಿಕ್ಷಣ ನೀಡುತ್ತಿರುವ ಸರ್ವೋದಯ ಶಿಕ್ಷಣ ಸಂಸ್ಥೆ ಶ್ಲಾಘನೀಯ ಕಾರ್ಯ ಮಾಡುತ್ತಿದೆ ಎಂದು ಹೇಳಿದರು.

ಇಂದಿನ ಸ್ಪರ್ಧಾತ್ಮಕ ಯುಗದಲ್ಲಿ ವೃತ್ತಿಪರ ಶಿಕ್ಷಣಕ್ಕೆ ಹೆಚ್ಚಿನ ಮಹತ್ವವಿದ್ದು, ನರ್ಸಿಂಗ್ ಹಾಗೂ ಪ್ಯಾರಾ ಮೆಡಿಕಲ್ ಕ್ಷೇತ್ರಗಳಲ್ಲಿ ಉತ್ತಮ ಅವಕಾಶಗಳಿವೆ. ವಿದ್ಯಾರ್ಥಿಗಳು ಸಮಯದ ಸದುಪಯೋಗ ಮಾಡಿಕೊಂಡು ಜ್ಞಾನಾರ್ಜನೆಗೆ ಒತ್ತು



ನೀಡಬೇಕು ಎಂದು ಅವರು ಸಲಹೆ ನೀಡಿದರು. ಸರ್ವೋದಯ ಶಿಕ್ಷಣ ಸಂಸ್ಥೆಯನ್ನು ಸ್ಥಾಪಿಸಿ ಬೆಳೆಸುತ್ತಿರುವ ಮನೋಜ್ ಕುಮಾರ್, ಅನಿಲ್ ಕುಮಾರ್ ಹಾಗೂ ಆಂಜನೇಯ ಅವರ ಸೇವೆಯನ್ನು ಪ್ರಶಂಸಿಸಿದ ಶಾಸಕರು, ಇಂತಹ ಶಿಕ್ಷಣ ಸಂಸ್ಥೆಗಳು ಮಾನವಿ ತಾಲೂಕಿನ ಶೈಕ್ಷಣಿಕ ಬೆಳವಣಿಗೆಗೆ ಬಲ ನೀಡುತ್ತಿವೆ ಎಂದು ಹೇಳಿದರು. ನಂತರ ಶಾಂತನಗೌಡ ಪಾಟೀಲ್ ಮಾತನಾಡಿ ಕಾರ್ಯಕ್ರಮದಲ್ಲಿ ಗಣ್ಯ ಅತಿಥಿಯಾಗಿ ಭಾಗವಹಿಸಿದ ಶಾಂತಾನಗೌಡ ಪಾಟೀಲ್ ಅವರು ವಿದ್ಯಾರ್ಥಿಗಳಿಗೆ ಜೀವನಪಾಠ ನೀಡುವ ಮಾತುಗಳ ಮೂಲಕ ಮಾರ್ಗದರ್ಶನ ನೀಡಿದರು.

ಭಾಷಣದಲ್ಲಿ ಅವರು, "ಹರ ಮುನಿದರೆ ಗುರು ಕಾಯುವರು; ಗುರುಗಳ ಆಶೀರ್ವಾದ ಇದ್ದರೆ ಜೀವನದಲ್ಲಿ ಏನಾದರೂ ಸಾಧನೆ ಮಾಡಬಹುದು" ಎಂದು ಹೇಳಿ, ವಿದ್ಯಾರ್ಥಿ ಜೀವನದಲ್ಲಿ ಗುರು-ಶಿಷ್ಯ ಪರಂಪರೆಯ ಮಹತ್ವವನ್ನು ವಿವರಿಸಿದರು. ಶಿಸ್ತು, ಶ್ರದ್ಧೆ ಹಾಗೂ ಪರಿಶ್ರಮದಿಂದ ಮಾತ್ರ ಉನ್ನತ ಗುರಿಗಳನ್ನು ತಲುಪಲು ಸಾಧ್ಯವಾಗುತ್ತದೆ ಎಂದು ಅವರು ಅಭಿಪ್ರಾಯಪಟ್ಟರು. ಈ ವೇಳೆ ಕಾರ್ಯಕ್ರಮವನ್ನು ಉದ್ಘಾಟಿಸಿದ ಕರ್ನಾಟಕ ಸರ್ಕಾರದ ಸಚಿವರಾದ ಎನ್. ಎಸ್. ಬೋಸರಾಜ್ ಅವರ ಬಗ್ಗೆ ಮೆಚ್ಚುಗೆಯನ್ನು ವ್ಯಕ್ತಪಡಿಸಿದ ಶಾಂತಾನಗೌಡ ಪಾಟೀಲ್ ಅವರು, ಸಾಮಾನ್ಯ ಜನರ ಹಿತಕ್ಕಾಗಿ ಹಾಗೂ ಶಿಕ್ಷಣ ಕ್ಷೇತ್ರದ ಅಭಿವೃದ್ಧಿಗಾಗಿ ಸಚಿವರು ನಿರಂತರ ಶ್ರಮಿಸುತ್ತಿದ್ದಾರೆ. ಅವರ ಸಹಕಾರದಿಂದ ಗ್ರಾಮೀಣ ಭಾಗದಲ್ಲೂ ಉತ್ತಮ ಶಿಕ್ಷಣ ಸಂಸ್ಥೆಗಳು ಬೆಳೆಯುತ್ತಿವೆ ಎಂದು ಹೇಳಿದರು.

ಸರ್ವೋದಯ ಶಿಕ್ಷಣ ಸಂಸ್ಥೆ ಮಾನವಿ ತಾಲೂಕಿನ ಶೈಕ್ಷಣಿಕ ಬೆಳವಣಿಗೆಯಲ್ಲಿ ಮಹತ್ವದ ಪಾತ್ರ ವಹಿಸುತ್ತಿದ್ದು, ಗ್ರಾಮೀಣ ವಿದ್ಯಾರ್ಥಿಗಳಿಗೆ ವೃತ್ತಿಪರ ಶಿಕ್ಷಣದ ಅವಕಾಶ ಒದಗಿಸುತ್ತಿರುವುದು ಶ್ಲಾಘನೀಯವಾಗಿದೆ ಎಂದು ಅವರು ಹೇಳಿದರು. ನಂತರ ನರ್ಸಿಂಗ್ ವಿದ್ಯಾರ್ಥಿಗಳಿಗೆ ದೀಪ ಬೆಳಗಿಸುವ ಮೂಲಕ ಸೇವಾ ಮನೋಭಾವ ಹಾಗೂ ಮಾನವೀಯ ಮೌಲ್ಯಗಳ ಕುರಿತು ಪ್ರತಿಜ್ಞೆ ಬೋಧಿಸಲಾಯಿತು. ನಂತರ ಅತಿಹೆಚ್ಚು ಅಂಕಗಳನ್ನು ಪಡೆದ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಸನ್ಮಾನ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದ್ದು, ಗಣ್ಯರು ವಿದ್ಯಾರ್ಥಿಗಳಿಗೆ ಪ್ರಶಸ್ತಿ ಹಾಗೂ ಪ್ರಮಾಣಪತ್ರಗಳನ್ನು ನೀಡಿ ಅಭಿನಂದಿಸಿದರು. ಈ ಸನ್ಮಾನವು ವಿದ್ಯಾರ್ಥಿಗಳಿಗೆ ಇನ್ನಷ್ಟು ಸಾಧನೆಗೆ ಪ್ರೇರಣೆಯಾಯಿತು.

ಜ 10 ರಂದು ನಡೆಯಲಿರುವ ಶಾಸಕ ಹಂಪಯ್ಯ ನಾಯಕ್ ಅವರ ಹುಟ್ಟುಹಬ್ಬದ ಪ್ರಯುಕ್ತ ಸರ್ವೋದಯ ಶಿಕ್ಷಣ ಸಂಸ್ಥೆಯ ವತಿಯಿಂದ ಮುಂಗಡವಾಗಿ ಹುಟ್ಟುಹಬ್ಬವನ್ನು ಆಚರಿಸಲಾಯಿತು. ಈ ಸಂದರ್ಭದಲ್ಲಿ ಸರ್ವೋದಯ ಶಿಕ್ಷಣ ಸಂಸ್ಥೆಯ ಆವರಣದಲ್ಲಿ ಕೇಕ್ ಕಟ್ ಮಾಡುವುದರ ಮೂಲಕ ಶಾಸಕ ಹಂಪಯ್ಯ ನಾಯಕ್ ಅವರ ಹುಟ್ಟುಹಬ್ಬವನ್ನು ಸಂಭ್ರಮದಿಂದ ಆಚರಿಸಲಾಯಿತು.

ಕಾರ್ಯಕ್ರಮಕ್ಕೆ ಆಗಮಿಸಿದ ಸಚಿವ ಎನ್ ಎಸ್ ಬೋಸರಾಜು ಹಾಗೂ ಎಲ್ಲಾ ಅತಿಥಿಗಳು ಹಾಗೂ ಸಂಸ್ಥೆಯ ಆಡಳಿತ ಮಂಡಳಿ ಸದಸ್ಯರು, ಪ್ರಾಂಶುಪಾಲರು, ಉಪನ್ಯಾಸಕರು, ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳು ಶಾಸಕರಿಗೆ ಶುಭಾಶಯಗಳನ್ನು ಸಲ್ಲಿಸಿದರು. ಶಾಸಕ ಹಂಪಯ್ಯ ನಾಯಕ್ ಅವರು ಶಿಕ್ಷಣ ಕ್ಷೇತ್ರಕ್ಕೆ ನೀಡುತ್ತಿರುವ ಕೊಡುಗೆ ಹಾಗೂ ಸರ್ವೋದಯ ಶಿಕ್ಷಣ ಸಂಸ್ಥೆಗೆ ನೀಡುತ್ತಿರುವ ಸಹಕಾರವನ್ನು ಈ ವೇಳೆ ಸ್ಮರಿಸಲಾಯಿತು. ಕಾರ್ಯಕ್ರಮವು ಆತ್ಮೀಯ ವಾತಾವರಣದಲ್ಲಿ ನಡೆಯಿತು. ವಿದ್ಯಾರ್ಥಿಗಳು ಶಿಸ್ತಿನಿಂದ ಪ್ರತಿಜ್ಞಾ ವಿಧಿಯಲ್ಲಿ ಭಾಗವಹಿಸಿದರು. ಕಾರ್ಯಕ್ರಮದಲ್ಲಿ ಸಂಸ್ಥೆಯ ಆಡಳಿತ ಮಂಡಳಿ ಸದಸ್ಯರು, ಉಪನ್ಯಾಸಕರು, ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು. ನಂತರ ಕಲ್ಮಠ ಶ್ರೀ ವಿರೂಪಾಕ್ಷ ಪಂಡಿತಾರಾಧ್ಯ ಶಿವಾಚಾರ್ಯ ಮಹಾಸ್ವಾಮಿಗಳು ಆಶೀರ್ವಚನ ನೀಡಿ ಸರ್ವೋದಯ ಎಂದರೆ ಕೇವಲ ಒಂದು ಸಂಸ್ಥೆಯ ಹೆಸರು ಅಲ್ಲ ಅದು ಎಲ್ಲರ ಉದಯ,

ಎಲ್ಲರ ಕಲ್ಯಾಣ, ಮಾನವೀಯತೆ, ಶಿಸ್ತು ಮತ್ತು ಸೇವೆಯ ಮೌಲ್ಯಗಳ ಪ್ರತೀಕ. ಈ ಸಂಸ್ಥೆ ವಿದ್ಯಾಭ್ಯಾಸದ ಜೊತೆಗೆ ಸಮಾಜದ ಬಗ್ಗೆ ಕಾಳಜಿ, ನೈತಿ-ಕತೆ ಮತ್ತು ನಾಯಕತ್ವವನ್ನು ಬೆಳೆಸುವ ಕಾರ್ಯವನ್ನು ವರ್ಷಗಳಿಂದ ಮಾಡುತ್ತಿದೆ, ಶಿಕ್ಷಣದ ಜೊತೆಗೆ ಸಂಸ್ಕಾರ ಅತ್ಯಂತ ಅಗತ್ಯ ಎಂದು ಒತ್ತಿ ಹೇಳಿದರು. ವಿದ್ಯಾರ್ಥಿಗಳಿಗೆ ಕೇವಲ ಪಠ್ಯಜ್ಞಾನವಷ್ಟೇ ಸಾಲದು; ಜೀವನ ಮೌಲ್ಯಗಳು, ಶಿಸ್ತು, ಸಂಯಮ, ಸತ್ಯನಿಷ್ಠೆ ಹಾಗೂ ಮಾನವೀಯತೆಯನ್ನು ಅಳವಡಿಸಿಕೊಂಡಾಗ ಮಾತ್ರ ಅವರು ಸಮಾಜದಲ್ಲಿ ಉತ್ತಮ ವ್ಯಕ್ತಿಗಳಾಗಿ ರೂಪುಗೊಳ್ಳಲು ಸಾಧ್ಯವೆಂದು ಹೇಳಿದರು. ಇಂದಿನ ಸ್ಪರ್ಧಾತ್ಮಕ ಯುಗದಲ್ಲಿ ಉನ್ನತ ವಿದ್ಯಾಭ್ಯಾಸದ ಜೊತೆಗೆ ಸಂಸ್ಕಾರಯುತ ಚಿಂತನೆ ಬೆಳೆಸುವುದು ಅತ್ಯಂತ ಮಹತ್ವದ ಸಂಗತಿ. ಸಂಸ್ಕಾರ ಹೊಂದಿದ ಶಿಕ್ಷಣವೇ ವ್ಯಕ್ತಿತ್ವ ವಿಕಸನಕ್ಕೆ ದಾರಿ ಮಾಡಿಕೊಡುತ್ತದೆ; ಅಂತಹ ವಿದ್ಯಾರ್ಥಿಗಳು ತಮ್ಮ ಕುಟುಂಬಕ್ಕೂ, ಸಮಾಜ-ಕ್ಕೂ ಹಾಗೂ ರಾಷ್ಟ್ರಕ್ಕೂ ಹೆಮ್ಮೆ ತರುವ ನಾಗ-ರಿಕರಾಗುತ್ತಾರೆ ಎಂದು ಮಹಾಸ್ವಾಮಿಗಳು ತಿಳಿಸಿದರು.

ಚೀಕಲಪರ್ವಿ ಶ್ರೀ ರುದ್ರಮುನೀಶ್ವರ ಮಠದ ಶ್ರೀ ಸದಾಶಿವ ಮಹಾಸ್ವಾಮಿಗಳು ಕಾರ್ಯಕ್ರಮಕ್ಕೆ ಆಗಮಿಸಿ ಆಶೀರ್ವಚನ ನೀಡಿ ಸರ್ವೋದಯ ಶಿಕ್ಷಣ ಸಂಸ್ಥೆಯಲ್ಲಿ ಪಠ್ಯಪುಸ್ತಕಗಳ ಜ್ಞಾನಕ್ಕಿಂತಲೂ ಹೆಚ್ಚಿನದನ್ನು ಕಲಿಯುತ್ತೀರಿ ? ಸಹಕಾರ, ಸಹಿಷ್ಣುತೆ, ಶಿಸ್ತು, ಸಮಯಪಾಲನೆ ಮತ್ತು ಸಮಾಜದ ಜವಾಬ್ದಾರಿಯನ್ನು ಬೆಳೆಸಿಕೊಳ್ಳುತ್ತೀರಿ ಎಂದು ಹೇಳಿದರು ವಿದ್ಯಾರ್ಥಿಗಳು ಶಿಕ್ಷಣದೊಂದಿಗೆ ಶ್ರದ್ಧೆ, ಶಿಸ್ತು ಮತ್ತು ಸಂಸ್ಕಾರವನ್ನು ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದು ಸಲಹೆ ನೀಡಿದರು. ಗುರುಗಳ ಮಾರ್ಗದರ್ಶನವನ್ನು ಗೌರವಿಸಿ, ಕಠಿಣ ಪರಿಶ್ರಮದ ಮೂಲಕ ಗುರಿ ಸಾಧಿಸಿದಾಗ ಮಾತ್ರ ಜೀವನದಲ್ಲಿ ಸಾರ್ಥಕತೆ ದೊರೆಯುತ್ತದೆ ಎಂದು ಅವರು ತಿಳಿಸಿದರು.

ಈ ಕಾರ್ಯಕ್ರಮದಲ್ಲಿ ಶ್ರೀ. ಎನ್. ಎಸ್. ಬೋಸರಾಜು ಸಚಿವರು , ಶ್ರೀ. ಹಂಪಯ್ಯ ನಾಯಕ ಸಾಹುಕಾರ (ಶಾಸಕರು ಮಾನವಿ) ಪೂಜ್ಯ ಶ್ರೀ ವಿರೂಪಾಕ್ಷ ಪಂಡಿತಾರಾಧ್ಯ ಸ್ವಾಮಿಜಿ ,ಪೂಜ್ಯ ಶ್ರೀ ಸದಾನಂದ ಸ್ವಾಮಿಜಿ, ಕ.ಸಾ.ಪ. ಜಿಲ್ಲಾ ಗೌ,ಕಾರ್ಯದರ್ಶಿ ತಾಯಪ್ಪ.ಬಿ.ಹೊಸೂರ, ಲಿಂಗಸೂಗೂರು ಸ್ವಾಮಿ ವಿವೇಕನಂದ ಆಯುರ್ವೇದ ವೈದ್ಯಕೀಯ ಕಾಲೇಜಿನ